ಸಂಪುಟ 01 | ಸಂಚಿಕೆ 180 | ಭಾನುವಾರ 24 ಮೇ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಅಂಗಸೂರು, ರಾಯಚೂರು,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ರಾಷ್ಟ್ರೀಯ ಸಹೋದರರ ದಿನ

ಪ್ರತಿ ವರ್ಷ ಮೇ 24 ರಂದು ರಾಷ್ಟ್ರೀಯ ಸಹೋದರರ ದಿನವನ್ನು (National Brothers Day) ಆಚರಿಸಲಾಗುತ್ತದೆ. ಸಹೋದರರ ನಡುವಿನ ಬಾಂಧವ್ಯವನ್ನು ಗೌರವಿಸಲು, ಅವರ ಮೇಲಿನ ಪ್ರೀತಿಯನ್ನು ವ್ಯಕ್ತಪಡಿಸಲು ಮತ್ತು ಬಾಲ್ಯದ ನೆನಪುಗಳನ್ನು ಮೆಲುಕು ಹಾಕಲು ಈ ದಿನವನ್ನು ಮೀಸಲಿಡಲಾಗಿದೆ.

## ಸುಭಾಷಿತ

ಬೇರೆ ಬೇರೆ ಧರ್ಮಗಳನ್ನು ಒಳಹೊಕ್ಕಿ ನೋಡಿದರೂ ಎಲ್ಲ ಧರ್ಮಗಳ ತಿರುಳು ಒಳ್ಳೆಯದನ್ನು ಬಯಸುವುದೇ ಆಗಿದೆ.

–ಸ್ವಾಮಿ ವಿವೇಕಾನಂದ

## ಸಿಎಂ ಸೇರಿ ಯಾವುದೇ ಹುದ್ದೆ ಕೊಟ್ಟರೂ ನಿಭಾಯಿಸಬಲ್ಲೆ
# ಅಚ್ಚರಿ ಹೇಳಿಕೆ ಕೊಟ್ಟ ಪರಮೇಶ್ವರ್

**ಬೆಂಗಳೂರು: ಮುಖ್ಯಮಂತ್ರಿ ಸೇರಿದಂತೆ ಯಾವುದೇ ಹುದ್ದೆ ಕೊಟ್ಟರೂ ನಿಭಾಯಿಸುವ ಸಾಮರ್ಥ್ಯ ನನಗಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೃಹಸಚಿವನಾಗಿ ಇದುವರೆಗೆ 8 ವರ್ಷಗಳ ಕಾಲ ಸಮರ್ಥವಾಗಿ ಕಾರ್ಯ ನಿರ್ವಹಿಸಿದ್ದೇನೆ. ಗೃಹಸಚಿವನಾಗಿರುವುದಕ್ಕೆ ನನಗೆ ಯಾವುದೇ ಬೇಸರವಿಲ್ಲ ಎಂದು ಸ್ಪಷ್ಟಪಡಿಸಿದರು.**



ಗೃಹಖಾತೆಯ ಜೊತೆಗೆ ಯಾವುದೇ ಹೆಚ್ಚುವರಿ ಜವಾಬ್ದಾರಿ ವಹಿಸಿದರೂ ನಿರ್ವಹಿಸುತ್ತೇನೆ. ಮುಖ್ಯಮಂತ್ರಿ ಸ್ಥಾನ ಕೊಟ್ಟರೂ ನಿಭಾಯಿಸುತ್ತೀರಾ ಎಂಬ ಪ್ರಶ್ನೆಗೆ ಅವರು, ಏನೇ ಕೊಟ್ಟರೂ ನಿಭಾಯಿಸುತ್ತೇನೆ. ಆ ಸಾಮಥ-'್ಯ ನನಗಿದೆ ಎಂದರು. ಸಂಪುಟ ಪುನರ್‌ರಚನೆ ಸಂದರ್ಭದಲ್ಲಿ ಖಾತೆ ಬದಲಾವಣೆಗೆ ಕೇಳಿದ್ದೀರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಗೃಹಖಾತೆ ಬದಲಾಯಿಸುವಂತೆ ನಾನು ಯಾರನ್ನೂ ಕೇಳಿಲ್ಲ ಎಂದು ಸ್ಪಷ್ಟಪಡಿಸಿದರು. ಶಾಸಕರು ಸಚಿವ ಸ್ಥಾನ ನೀಡುವಂತೆ ಕೋರುವುದರಲ್ಲಿ ಯಾವುದೇ ತಪ್ಪಿಲ್ಲ. ಎರಡು-ಮೂರು ಬಾರಿ ಶಾಸಕರಾಗಿದ್ದಾರೆ.

ಅವರಿಗೂ ಸಚಿವರಾಗಬೇಕೆಂಬ ಅಪೇಕ್ಷೆ ಇದೆ. ಹೀಗಾಗಿ ಹೈಕಮಾಂಡ್ ಮೇಲೆ ಅವರು ಒತ್ತಡ ತರುತ್ತಿರಬಹುದು. ಆದರೆ ಶೇ.15ಕ್ಕಿಂತ ಹೆಚ್ಚು ಸಚಿವ ಸ್ಥಾನ ನೀಡಲಾಗುವುದಿಲ್ಲ. ಕೆಲವು ಹಿರಿಯ ಸಚಿವರನ್ನು ಸಂಪುಟದಿಂದ ಕೈ ಬಿಡುವುದು ಹೈಕಮಾಂಡ್‌ಗೆ ಬಿಟ್ಟ ವಿಚಾರ ಎಂದರು. ಕಾಕ್ರೋಜ್ ಜನತಾ ಪಕ್ಷಕ್ಕೆ ಸಮಾವೇಶ ನಡೆಸಲು ಪೊಲೀಸರು ಅನುಮತಿ ನಿರಾಕ-ರಿಸಿರುವ ಬಗ್ಗೆ ಕೇಳಲಾದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಯಾವ ಉದ್ದೇಶಕ್ಕೆ ಸಮಾವೇಶ ಮಾಡುತ್ತಿದ್ದಾರೆ?, ಯಾರ್ಯಾರು ಭಾಗಿಯಾಗುತ್ತಾರೆ ಎಂಬುದನ್ನೆಲ್ಲಾ ಪೊಲೀಸರು ಪರಿಶೀಲಿಸಿ ಅನುಮತಿ ಕೊಡಬೇಕೇ, ಬಿಡಬೇಕೇ ಎನ್ನುವುದನ್ನು ನಿರ್ಧರಿಸುತ್ತಾರೆ. ಈ ವಿಚಾರದಲ್ಲಿ ಅಗತ್ಯ ಕ್ರಮ ಕೈಗೊಳ್ಳುವುದು ಪೊಲೀಸರಿಗೆ ಬಿಟ್ಟ ವಿಚಾರ ಎಂದರು. ರಾಜಕಾರಣಿಗಳು ರಾಜಕೀಯ ಮಾಡುತ್ತಾರೆ. ಪೊಲೀಸಿನವರು ಅವರ ಕೆಲಸ ಮಾಡುತ್ತಾರೆ. ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವುದು ಅವರ ಜವಾಬ್ದಾರಿ.


ನಮ ಪಕ್ಷ ನಮ ನಾಯಕರು ಬೆಂಬಲ ನೀಡುವುದು ಬೇರೆ. ಪೊಲೀಸರು ಅವರ ಕೆಲಸವನ್ನು ಮಾಡುತ್ತಾರೆ. ಪೊಲೀಸರ ನಿರ್ಧಾರವನ್ನು ಓವರ್ ರೂಲ್ ಮಾಡಿ ಸರ್ಕಾರ ಅನುಮತಿ ಕೊಡುವುದಾದರೆ ಅದು ಬೇರೆ ವಿಚಾರವಾಗಲಿದೆ ಎಂದು ಹೇಳಿದರು. ವಿವಿಧ ಹಬ್ಬಗಳ ಸಂದರ್ಭದಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಲಾಗುತ್ತದೆ ಎಂದು ವಕ್?ಫಬೋರ್ಡ್‌ನಿಂದ ಬಕ್ರೀದ್ ಆಚರಣೆ ಸಂದರ್ಭದಲ್ಲಿ ರಕ್ಷಣೆ ಕೋರಿ ಪತ್ರ ಬರೆದಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದರು. ಆ ಪತ್ರಕ್ಕೆ ಯಾವ ರೀತಿ ಸ್ಪಂದಿಸಬೇಕೋ ಅದರಂತೆ ಪೊಲೀಸರು ಸ್ಪಂದಿಸುತ್ತಾರೆ.

ಮೊಕದ್ದಮೆಗಳನ್ನು ವಾಪಸ್ ಪಡೆದಿರುವ ಬಗ್ಗೆ ಹಿಂದೂ ಸಂಘಟನೆಗಳು ವಿರೋಧ ಮಾಡುತ್ತಿರುವುದರ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಪಕ್ಷ ಎಲ್ಲರನ್ನೂ ಸಮಾನ ದೃಷ್ಟಿಯಿಂದ ನೋಡುತ್ತದೆ. ತುಳಿತಕ್ಕೆ ಒಳಗಾದವರು, ಶೋಷಿತರ ಬಗ್ಗೆ 1947 ರಿಂದಲೂ ಕಾಂಗ್ರೆಸ್ ಪಕ್ಷ ಕಾರ್ಯಕ್ರಮಗಳನ್ನು ಹಮಿಕೊಂಡು ಬಂದಿದೆ ಎಂದು ಇದೇ ಸಂದರ್ಭದಲ್ಲಿ ಹೇಳಿದರು. ರಾಜ್ಯಸಭೆಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಬಂಧ ಕೆಪಿಸಿಸಿ ಅಧ್ಯಕ್ಷರು, ಮುಖ್ಯಮಂತ್ರಿಗಳು ಹಾಗೂ ಹೈಕಮಾಂಡ್ ನಿರ್ಧಾರ ಕೈಗೊಳ್ಳುತ್ತಾರೆ ಎಂದು ಅವರು ತಿಳಿಸಿದರು.

## ನೀಟ್ ಪಶ್ನೆ ಪತ್ರಿಕೆ ಸೋರಿಕೆ ರೂವಾರಿ ಬಂಧನ

ನೈಜ್ಯ ದೆಸೆ ನ್ಯೂಸ್

ನವದೆಹಲಿ: ನೀಟ್ ಪರೀಕ್ಷೆಯ ಭೌತಶಾಸ್ತ್ರ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ-ಕ್ಕೆ ಸಂಬಂಧಿಸಿದಂತೆ ಎನ್‌ಟಿಎ ತಜ್ಞರೊಬ್ಬರನ್ನು ಸಿಬಿಐ ಬಂಧಿಸಿದೆ. ಮಹಾರಾಷ್ಟ್ರದ ಪುಣೆಯಲ್ಲಿರುವ ಸೇಥ್ ಹಿರಾಲಾಲ್ ಸರಾಫ್ ಪ್ರಶಾಲಾದಲ್ಲಿ ಉದ್ಯೋಗದಲ್ಲಿರುವ ಆರೋಪಿ ಮನೀಷಾ ಸಂಜಯ್ ಹವಾಲ್ದಾರ್ ಬಂಧಿತ ಆರೋಪಿಯಾಗಿದ್ದಾರೆ.




ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ತಜ್ಞರಾಗಿ ನೇಮಕಗೊಂಡಿದ ಅವರನ್ನು ಕೇಂದ್ರೀಯ ಸಂಸ್ಥೆಯ ವಿಚಾರಣೆಯ ನಂತರ ಬಂಧಿಸಲಾಗಿದೆ. ಮೇ 16 ರಂದು ಅರೆಸ್ಟ್ ಆದ ಸಹ-ಆರೋಪಿ ಮನೀಷಾ ಮಾಂಧರೆ ಜೊತೆ ನೀಟ್ ಯುಜಿ ಪರೀಕ್ಷೆಯ ಹಲವಾರು ಭೌತಶಾಸ್ತ್ರ ಪ್ರಶ್ನೆಗಳನ್ನು ಹಂಚಿಕೊಂಡಿದ್ದಾರೆ ಎಂದು ತನಿಖಾಧಿಕಾ-ರಿಗಳು ಆರೋಪಿಸಿದ್ದಾರೆ. ಹವಾಲ್ದಾರ್ ಹಂಚಿಕೊಂಡ ಪ್ರಶ್ನೆಗಳು 2026 ರ ನೀಟ್ ಯುಜಿ ಪರೀಕ್ಷೆಯ ಪ್ರಶ್ನೆಪತ್ರಿಕೆಗಳಲ್ಲಿ ಬಂದಿದ್ದ ಭೌತಶಾಸ್ತ್ರದ ಪ್ರಶ್ನೆಗಳಿಗೆ ಹೊಂದಿಕೆಯಾಗುತ್ತವೆ. ಪ್ರಶ್ನೆ ಪತ್ರಿಕೆ ಸೋ-ರಿಕೆಯಲ್ಲಿ ಇವರ ಪಾತ್ರ ನಿರ್ಣಾಯಕವಾಗಿ ಕಂಡುಬಂದಿದೆ.ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ಮೇ 16 ರಂದು ಪುಣೆಯ ಸಸ್ಯಶಾಸ್ತ್ರ ಶಿಕ್ಷಕಿ ಮಾಂಧರೆಯನ್ನು ಬಂಧಿಸಿದೆ. ಹವಾಲ್ದಾರ್ ಆಕಾಂಕ್ಷಿಗಳೊಂದಿಗೆ ಹಂಚಿಕೊಂಡ ಪ್ರಶ್ನೆಗಳು 2026 ರ ನೀಟ್ ಯುಜಿ ಪರೀಕ್ಷೆಯ ಭೌತಶಾಸ್ತ್ರ ಪತ್ರಿಕೆಯೊಂದಿಗೆ ತಾಳೆಯಾಗಿದೆ.

## ನರೇಗಾ ಕಾಮಗಾರಿಗಳಲ್ಲಿ ಕಾರ್ಮಿಕರ ಜೀವದ ಜೊತೆ ಚೆಲ್ಲಾಟ: ಚಿಕಿತ್ಸೆ ಇಲ್ಲ, ನೀರು ಇಲ್ಲ, ನಿಯಮಗಳಿಗೆ ಬೆಲೆನೇ ಇಲ್ಲ: ಪ್ರಶಾಂತ್ .ಪಿ

ನೈಜ್ಯ ದೆಸೆ ನ್ಯೂಸ್

**ಚಿಕ್ಕಕೊಟ್ನೇಕಲ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ನರೇಗಾ ಕಾಮಗಾರಿಗಳಲ್ಲಿ ಕಾರ್ಮಿಕರ ಮೂಲಭೂತ ಹಕ್ಕುಗಳನ್ನು ಸಂಪೂರ್ಣ ನಿರ್ಲಕ್ಷ್ಯ ಮಾಡಲಾಗುತ್ತಿದೆ ಎಂಬ ಗಂಭೀರ ಆರೋಪಗಳು ಕೇಳಿಬರುತ್ತಿವೆ. ಕಾಮಗಾರಿ ಸ್ಥಳದಲ್ಲಿ ಗಾಯಗೊಂಡ ಕಾರ್ಮಿಕರಿಗೆ ಚಿಕಿತ್ಸೆಯ ವ್ಯವಸ್ಥೆಯೇ ಇಲ್ಲದೆ ನಿರ್ಲಕ್ಷ್ಯ ವಹಿಸಲಾಗುತ್ತಿದೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.**



ತೀವ್ರ ಬಿಸಿಲಿನಲ್ಲಿ ದುಡಿಯುವ ಕಾರ್ಮಿಕರಿಗೆ ಕುಡಿಯುವ ನೀರು, ನೆರಳು, ವಿಶ್ರಾಂತಿ ಸೇರಿದಂತೆ ಯಾವುದೇ ಮೂಲಭೂತ ಸೌಲಭ್ಯ ಕಲ್ಪಿಸದೇ ಕೆಲಸ ಮಾಡಿಸಲಾಗುತ್ತಿದೆ. ದಿನಪೂರ್ತಿ ದುಡಿದ ಕಾರ್ಮಿಕರಿಗೆ ಕೇವಲ ?210 ಮತ್ತು ?220 ಮಾತ್ರ ಕೂಲಿ ಪಾವತಿಸಲಾಗುತ್ತಿದೆ ಎಂಬ ಆರೋಪಗಳೂ ಕೇಳಿಬರುತ್ತಿವೆ. ಉದ್ಯೋಗ ಮಿತ್ರರಿಗೆ ಅಗತ್ಯವಾದ ಪ್ರಾಯೋಗಿಕ ತರಬೇತಿ ನೀಡದೇ ಜವಾಬ್ದಾರಿ ನೀಡಿರುವುದಲ್ಲದೆ, ಅವರಿಗೆ ಒದಗಿಸಬೇಕಾದ ಮೂಲಭೂತ ಸೌಕರ್ಯಗಳನ್ನೂ ನೀಡಿಲ್ಲ ಎನ್ನಲಾಗಿದೆ.

ಜಾಗೃತಿ ಉಸ್ತುವಾರಿ ಸಮಿತಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಸದಸ್ಯರನ್ನು ಸೇರಿಸದೇ ನಿಯಮ ಉಲ್ಲಂಘನೆ ಮಾಡಲಾಗಿದೆ ಎಂಬ ಆರೋಪವೂ ಕೇಳಿಬಂದಿದೆ. ಇದಲ್ಲದೆ ಗ್ರಾಮಸಭೆ ನಡೆಸಿಲ್ಲ, ಕ್ರಿಯಾಯೋಜನೆ ಸಿದ್ಧಪಡಿಸಿಲ್ಲ, ಸ್ಥಳ ಪರಿಶೀಲನೆ ಮಾಡದೇ ಕಾಮಗಾರಿಗಳನ್ನು ನಡೆಸಲಾಗುತ್ತಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಜೆಇ (JE) ರವರು ಯಾವುದೇ ಸ್ಥಳ ಪರಿಶೀಲನೆ ಮಾಡದೇ ಮನೆಯಲ್ಲಿ ಕುಳಿತು ಕಾರ್ಯನಿರ್ವಹಿಸುತ್ತಿದ್ದು, ಇಂಜಿನಿಯರಿಂಗ್ ಪೂರ್ಣಗೊಳಿಸದೇ ಇರುವ ವ್ಯಕ್ತಿಯಿಂದ ಪರಿಶೀಲನೆ ಮಾಡಿಸಲಾಗುತ್ತಿದೆ ಎನ್ನಲಾಗಿದೆ.

ಈ ಎಲ್ಲಾ ಅವ್ಯವಸ್ಥೆಗಳ ಕುರಿತು ಚಿಕ್ಕಕೊಟ್ನೇಕಲ್ ವ್ಯಾಪ್ತಿಗೆ ಬರುವ ಜಾಗೀರ್ ಪನ್ನೂರಿನ ಪ್ರಶಾಂತ್ ಜಾಗೀರ್ ಪನ್ನೂರು, ಭೀಮಸೇನೆ ಕರ್ನಾಟಕ ವಿದ್ಯಾರ್ಥಿ ಘಟಕ ದ ರಾಜ್ಯ ಪ್ರಧಾನ ಕಾರ್ಯದರ್ಶಿ ಗಂಭೀರ ಆಕ್ರೋಶ ವ್ಯಕ್ತಪಡಿಸಿದ್ದು, ಕೂಡಲೇ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

## 'ಭೂ ಸುರಕ್ಷಾ' ಯೋಜನೆ: ದಾಖಲೆ ಡಿಜಿಟಲೀಕರಣ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಸರ್ಕಾರದ ಮಹತ್ವಾಕಾಂಕ್ಷೆಯ 'ಭೂಸುರಕ್ಷಾ' ಯೋಜನೆಯಡಿ ಮಸ್ಕಿ ತಾಲ್ಲೂಕಿನ ಕಂದಾಯ ಇಲಾಖೆಯ ಮಹತ್ವದ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.**

ಎಂದು ತಹಸೀಲ್ದಾರ್ ಮಂಜುನಾಥ್ ಭೋಗಾವತಿ ತಿಳಿಸಿದ್ದಾರೆ. ದಾಖಲೆಗಳ ಡಿಜಿಟಲೀಕರಣದಿಂದ ಸಾರ್ವಜನಿಕರು ಕಚೇರಿಗಳಿಗೆ ಅಲೆದಾಡುವುದು ತಪ್ಪಲಿದೆ. ಜಮೀನು ಹಾಗೂ ಕಂದಾಯ ಸಂಬಂಧಿತ ದಾಖಲೆಗಳನ್ನು ಮನೆಯಲ್ಲಿಯೇ



ಕುಳಿತು ಮೊಬೈಲ್ ಅಥವಾ ಕಂಪ್ಯೂಟರ್ ಮೂಲಕ ಪಡೆಯಲು ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

'ಭೂ ದಾಖಲೆಗಳ ಸುರಕ್ಷತೆ, ಸಂರಕ್ಷಣೆ ಹಾಗೂ ಸಾರ್ವಜನಿಕರಿಗೆ ತ್ವರಿತ ಸೇವೆ ಒದಗಿಸುವ ಉದ್ದೇಶದಿಂದ ಈ ಯೋಜನೆ ಜಾರಿಗೆ ತರಲಾಗಿದೆ.

ಈಗಾಗಲೇ ತಾಲ್ಲೂಕಿನ ಹಲವು ದಾಖಲೆಗಳನ್ನು ಸ್ಕ್ಯಾನ್ ಮಾಡಿ ಡಿಜಿಟಲ್ ರೂಪದಲ್ಲಿ ಸಂಗ್ರಹಿಸಲಾಗಿದೆ. ಸಾರ್ವಜನಿಕರು ತಮ್ಮ ಅಗತ್ಯ ದಾಖಲೆಗಳನ್ನು ಆನ್‌ಲೈನ್ ಮೂಲಕ ಪಡೆಯಬಹುದಾಗಿದ್ದು, ಕಚೇರಿಗಳಲ್ಲಿನ ಅನಗತ್ಯ ವಿಳಂಬ ಮತ್ತು ದಾಖಲೆ ಕಳೆದು ಹೋಗುವ ಸಮಸ್ಯೆ ತಪ್ಪಲಿದೆ' ಎಂದು ತಿಳಿಸಿದ್ದಾರೆ. ಮಾಹಿತಿಗಾಗಿ ವೆಬ್‌ಸೈಟ್ recordroom.karnataka.gov.in ನೀಡಬಹುದು ಎಂದಿದ್ದಾರೆ.

## "ನಾಳೆ ಹೃದಯ ರಕ್ಷಣೆ ಕಾರ್ಯಕ್ರಮ"

ನೈಜ್ಯ ದೆಸೆ ನ್ಯೂಸ್

**ಸಿರವಾರ: ಹೃದಯ ರಕ್ಷಣೆ ಕುರಿತು ಜಾಗೃತಿ ಮೂಡಿಸಲು ಸಂಜೀವಿನಿ ಟ್ರಸ್ಟ್ ಸಿರವಾರ ವತಿಯಿಂದ ಮೇ24 ಭಾನುವಾರ ಸಂಜೆ 5 ಗಂಟೆಗೆ 'ಹೃದಯ ರಕ್ಷಣೆ ಕಾರ್ಯಕ್ರಮ' ಹಮ್ಮಿಕೊಳ್ಳಲಾಗಿದೆ ಎಂದು ಸಂಜೀವಿನಿ ಟ್ರಸ್ಟ್‌ನ ಅಧ್ಯಕ್ಷ ಜ್ಞಾನಮಿತ್ರ ತಿಳಿಸಿದ್ದಾರೆ.**

ಪಟ್ಟಣದ ಸರ್ಕಾರಿ ಬಾಲಕರ ಉನ್ನತೀಕರಿಸಿದ ಶಾಲೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ರಾಯಚೂರು ಒಪೆಕ್ ಆಸ್ಪತ್ರೆಯ ಹಿರಿಯ ಹೃದಯ ರೋಗ ತಜ್ಞ ಡಾ. ಸುರೇಶ ಸಗರದ ಅವರು ಹೃದಯಾಘಾತದ ಕಾರಣ, ಪರಿಹಾರ



ಹಾಗೂ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಪ್ರೊಜೆಕ್ಟರ್ ಮೂಲಕ ಮಾಹಿತಿ ನೀಡಲಿದ್ದಾರೆ.

ನವಲಕಲ್ ಬೃಹನ್ಮಠದ ಅಭಿನವ ಶ್ರೀ ಸೋಮನಾಥ ಶಿವಾಚಾರ್ಯರು, ಪ್ರಜಾಪಿತ ಬ್ರಹ್ಮಕುಮಾರಿ ವಿಶ್ವವಿದ್ಯಾಲಯದ ಜ್ಯೋತಿ ಅಕ್ಕ, ಫಾದರ್ ಸುಂದರರಾಜ್ ಸ್ಯಾಮ್ಯುಯೆಲ್, ಖಾಜಿ ಮೊಹಮ್ಮದ್ ಮಂಜೂರು ಹಸನ್ ಮುಲ್ಲಾ ಅಧ್ಯಕ್ಷತೆ ವಹಿಸುವರು.

ಸಣ್ಣ ನೀರಾವರಿ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಭೋಸರಾಜು ಕಾರ್ಯಕ್ರಮ ಉದ್ಘಾಟಿಸಲಿದ್ದು, ಶಾಸಕ ಜಿ. ಹಂಪಯ್ಯ ನಾಯಕ ಅಧ್ಯಕ್ಷತೆ ವಹಿಸಲಿದ್ದಾರೆ. ಪಪಂ ಅಧ್ಯಕ್ಷ ಹಾಜಿ ಚೌದ್ರಿ, ಉಪಾಧ್ಯಕ್ಷೆ ಲಕ್ಷ್ಮೀ ಆದಪ್ಪ, ಸರ್ವ ಸದಸ್ಯರು, ಗಣ್ಯರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಾಲಹಳ್ಳಿಯ ವಿವಿಧ ಸಮಸ್ಯೆಗಳ ಪರಿಹಾರಕ್ಕೆ ಆಗ್ರಹಿಸಿ ಸಾಮೂಹಿಕ ಸಂಘಟನೆಗಳ ಒಕ್ಕೂಟದಿಂದ ಶಾಸಕಿಯಾದ ಕರೆಮ್ಮ ಜಿ ನಾಯಕ ಅವರಿಗೆ ಮನವಿ

ನೈಜ್ಯ ದೆಸೆ ನ್ಯೂಸ್

**ಜಾಲಹಳ್ಳಿ: ಜಾಲಹಳ್ಳಿಯಲ್ಲಿ ವಿವಿಧ ಕಾಮಗಾ-ರಿಗಳ ಉದ್ಘಾಟನೆಗೆ ಆಗಮಿಸಿದ್ದ ಶಾಸಕರಾದ ಕರೆಮ್ಮ ಜಿ ನಾಯಕ್ ಅವರಿಗೆ ಸಾಮೂಹಿಕ ಸಂಘಟನೆಗಳ ಒಕ್ಕೂಟದ ವತಿಯಿಂದ ಹಲವು ಸಾರ್ವಜನಿಕ ಬೇಡಿಕೆಗಳ ಕುರಿತು ಮನವಿ ಸಲ್ಲಿಸಲಾಯಿತು.**

ಈ ಸಂದರ್ಭದಲ್ಲಿ ತಾಲೂಕು ಕೃಷಿ ಕೂಲಿಕಾರರ ಸಂಘಟನೆ ಅಧ್ಯಕ್ಷರಾದ ಲಿಂಗಣ್ಣ ನಾಯಕ ಮಕಾಶಿ ಮಾತನಾಡಿ, ಜಾಲಹಳ್ಳಿ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾ-ರಿಗಳಾದ ಡಾ. ಆರ್.ಎಸ್. ಹುಲಿಮನಿ ಗೌಡ ಅವರು ಸರ್ಕಾರಿ ಆಸ್ಪತ್ರೆಗೆ ಬರುವ ರೋಗಿಗಳಿಗೆ ಸಮರ್ಪಕ ಚಿಕಿತ್ಸೆ ನೀಡದೇ ದುರ್ವರ್ತನೆ ತೋರುತ್ತಿದ್ದಾರೆ ಎಂದು ಆರೋಪಿಸಿದರು. ತಮ್ಮ ಖಾಸಗಿ ಆಸ್ಪತ್ರೆಗೆ ಸಂಬಂಧಿಸಿದ ರೋಗಿಗಳಿಗೆ ಮಾತ್ರ ಸೂಕ್ತ ಸ್ಪಂದನೆ ನೀಡಲಾಗುತ್ತಿದ್ದು, ಸರ್ಕಾರಿ ಆಸ್ಪತ್ರೆಗೆ ಬರುವ ರೋಗಿಗಳನ್ನು ಬೇರೆಡೆಗೆ ಹೋಗುವಂತೆ ಹೇಳಲಾಗುತ್ತಿದೆ ಎಂದು ದೂರಿದರು.

ಅದೇ ರೀತಿ ಸಮುದಾಯ ಆರೋಗ್ಯ ಕೇಂದ್ರಕ್ಕೆ ಬರುವ ರೋಗಿಗಳಿಗೆ ಅಗತ್ಯ ಔಷಧಿಗಳನ್ನು ತಮ್ಮ ಖಾಸಗಿ ಆಸ್ಪತ್ರೆಯ ಔಷಧಿ ಅಂಗಡಿಗೆ ಕಳುಹಿಸಲಾಗುತ್ತಿದೆ ಎಂದು ಆರೋಪಿಸಿ, ಸರ್ಕಾರದ ನಿಯಮಗಳನ್ನು ಉಲ್ಲಂಘಿಸುತ್ತಿರುವ ವೈದ್ಯಾಧಿಕಾರಿಯನ್ನು ತಕ್ಷಣ ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿದರು. ನಮ್ಮ ಕರ್ನಾಟಕ ಸೇನೆ ಜಿಲ್ಲಾ ಕಾರ್ಯದರ್ಶಿಗಳಾದ ಭೀಮನಗೌಡ ಎಂ. ಪಾಟೀಲ್ ಅವರು ಕೂಡಲೇ ಎಲ್ಲಾ ಬೇಡಿಕೆಗಳನ್ನು ಈಡೇ-ರಿಸುವಂತೆ ಶಾಸಕರಲ್ಲಿ ಮನವಿ ಮಾಡಿದರು.




ಮುಖ್ಯ ಬೇಡಿಕೆಗಳು:

- ■ ಜಾಲಹಳ್ಳಿ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ. ಆರ್.ಎಸ್. ಹುಲಿಮನಿ ಗೌಡರನ್ನು ವರ್ಗಾವಣೆ ಮಾಡಬೇಕು.
- ■ ದೇವದುರ್ಗ ತಾಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಮದ್ಯ ಮಾರಾಟ, ಮಟಕಾ ಹಾಗೂ ಜೂಜಾಟ ತಡೆಯಲು ವಿಫಲವಾದ ಪೊಲೀಸ್ ಮತ್ತು ಅಬಕಾರಿ ಇಲಾಖೆಗಳ ವಿರುದ್ಧ ಕ್ರಮ ಕೈಗೊಳ್ಳಬೇಕು.
- ■ ಜಾಲಹಳ್ಳಿ ವಾಲ್ಮೀಕಿ ವೃತ್ತದಿಂದ ಬಸವೇಶ್ವರ ವೃತ್ತದವರೆಗೆ ರಸ್ತೆ ಬದಿಯ ಒತ್ತುವರಿ ಅಂಗಡಿಗಳನ್ನು ತೆರವುಗೊಳಿಸಬೇಕು.
- ■ ವಾಲ್ಮೀಕಿ ಭವನ ಕಾಮಗಾ-ರಿಯನ್ನು ಪೂರ್ಣಗೊಳಿಸಬೇಕು.
- ■ ಬಸವೇಶ್ವರ ವೃತ್ತದಿಂದ ವಾಲ್ಮೀಕಿ ವೃತ್ತದವರೆಗೆ ಡಿವೈಡರ್ ನಿರ್ಮಿಸಿ ವಿದ್ಯುತ್ ದೀಪ ಅಳವಡಿಸಬೇಕು.
- ■ ಅಂಬೇಡ್ಕರ್ ವೃತ್ತದಿಂದ ಶ್ರೀ ಲಕ್ಷ್ಮೀ ರಂಗನಾಥ ದೇವಸ್ಥಾನದವರೆಗೆ ನಿರ್ಮಿಸಿರುವ ಕಳಪೆ ಸಿಸಿ ರಸ್ತೆಯ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಬೇಕು.

ಈ ಎಲ್ಲಾ ಬೇಡಿಕೆಗಳಿಗೆ ಸ್ಪಂದಿಸಿದ ಶಾಸಕರಾದ ಕರೆಮ್ಮ ಜಿ ನಾಯಕ್ ಆದ-'ಷ್ಟು ಬೇಗ ಸಮಸ್ಯೆಗಳನ್ನು ಪರಿಹ-ರಿಸುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ತಾಲೂಕು ಕೃಷಿ ಕೂಲಿಕಾರರ ಸಂಘಟನೆ ಮುಖಂಡರಾದ ಶರಣಪ್ಪ ಕಾರಲಕುಂಟಿ, ಕರವೇ ಮುಖಂಡರಾದ ಭೀಮನಗೌಡ ಎಂ. ಪಾಟೀಲ್, ನಂದಪ್ಪ ಪಿ. ಮಡ್ಡಿ, ರಂಗಪ್ಪ ಬಂಡಿ, ಬಸವರಾಜ ಗೋಪಾಳಪುರ, ತಮ್ಮಣ್ಣ ಹೇರುಂಡಿ, ಭೀಮಣ್ಣ ನಾಯಕ, ಮಲ್ಲು ತೆಗ್ಗಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕರವೇ ಹಾಗೂ ನಮ್ಮ ಕರ್ನಾಟಕ ಸೇನೆಯ ಪದಾಧಿಕಾ-ರಿಗಳು ಕೂಡ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

## ನೇಮಕಾತಿ ಪ್ರಕಟಣೆ

KVAFSU ನೇಮಕಾತಿ 2026–96 ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಮೇ 23, 2026 KVAFSU ನೇಮಕಾತಿ 2026: 96 ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಪಶುವೈದ್ಯಕೀಯ, ಪ್ರಾಣಿ ಮತ್ತು ಮೀನುಗಾರಿಕೆ ವಿಜ್ಞಾನ ವಿಶ್ವವಿದ್ಯಾಲಯವು ಮೇ 2026 ರ KVAFSU ಅಧಿಕೃತ ಅಧಿಸೂಚನೆಯ ಮೂಲಕ ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೀದರ್ – ಕರ್ನಾಟಕ ಸರ್ಕಾರದಲ್ಲಿ ವೃತ್ತಿಯನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 20–ಜೂನ್–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 21–05–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 20–ಜೂನ್–2026 ಅಧಿಕೃತ ವೆಬ್‌ಸೈಟ್: kvafsu.edu.in

## ಮೌಂಟ್ ಎವರೆಸ್ಟ್ ಇಳಿಯುವಾಗ ಇಬ್ಬರು ಪರ್ವತಾರೋಹಿಗಳು ಸಾವು

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ವಿಶ್ವದ ಅತಿ ಎತ್ತರದ ಶಿಖರವಾದ ಮೌಂಟ್ ಎವರೆಸ್ಟ್ ಅನ್ನು ಏರಿದ ಇಬ್ಬರು ಭಾರತೀಯ ಪರ್ವತಾರೋಹಿಗಳು ಇಳಿಯುವಾಗ ಸಾವನ್ನಪ್ಪಿದ್ದಾರೆ. ನೇಪಾಳದ ಎಕ್ಸ್‌ಪೆಡಿಶನ್ ಆಪರೇಟರ್ಸ್ ಅಸೋಸಿಯೇಷನ್‌ನ ಪ್ರಧಾನ ಕಾರ್ಯದರ್ಶಿ ರಿಷಿ ಭಂಡಾರಿ ಸುದ್ದಿ ಸಂಸ್ಥೆಯಿಂದಕ್ಕೆ ತಿಳಿಸಿದ್ದಾರೆ. ಇಳಿಯುವಾಗ ಒಬ್ಬ ಪರ್ವತಾರೋಹಿ ತೀವ್ರ ದಣಿದಿದ್ದರು.**



"ಶೆರ್ಪಾ ಮಾರ್ಗದರ್ಶಕರು ಅವರ ಜೀವವನ್ನು ಉಳಿಸಲು ಮತ್ತು ರಾತ್ರಿಯಿಡೀ ಬಾಲ್ಕನಿಯಿಂದ ದಕ್ಷಿಣ ಕೊಲ್‌ಗೆ ಅವರನ್ನು ರಕ್ಷಿಸಲು ನಿಜವಾಗಿಯೂ ಶ್ರಮಿಸಿದರು, ಆದರೆ ಅವರ ಪ್ರಯತ್ನಗಳ ಹೊರತಾಗಿಯೂ ಆರೋಹಿಯನ್ನು ಉಳಿಸಲು ಸಾಧ್ಯವಾಗಲಿಲ್ಲ ಎಂದು ಅವರು ಹೇಳಿದರು. ನಿನ್ನೆ ಸಂಜೆ ಅದೇ ಸಮಯದಲ್ಲಿ, ಮತ್ತೊಬ್ಬ ಪರ್ವತಾರೋಹಿ ಅರುಣ್ ತಿವಾರಿ ಸುಮಾರು ಸಂಜೆ 5:30 ಕ್ಕೆ ಎವರೆಸ್ಟ್ ಅನ್ನು ಏರಿದರು ಎಂದು ಅವರು ಹೇಳಿದರು. "ಅವರಿಗೆ ಇಬ್ಬರು ಅನುಭವಿ ಕ್ಲೈಂಬಿಂಗ್ ಶೆರ್ಪಾ ಮಾರ್ಗದರ್ಶಕರು ಇದ್ದರು ಮತ್ತು ಅವರು ಒಟ್ಟಿಗೆ ಇಳಿಯಲು ಪ್ರಯತ್ನಿಸುತ್ತಿದ್ದರು, ಆದರೆ ಅವರು ಹಿಲರಿ ಮೆಟ್ಟಿಲುಗಳಲ್ಲಿ ದಣಿದಿದ್ದರು, ಮತ್ತು ನಮ್ಮ ಮಾರ್ಗದರ್ಶಕರು ಅವರನ್ನು ಮರಳಿ ಕರೆತರಲು ಸಾಧ್ಯವಾಗಲಿಲ್ಲ" ಎಂದು ಭಂಡಾರಿ ಹೇಳಿದರು. ತಿವಾರಿ ಇಳಿಯುವಾಗ ಹಿಲರಿ ಮೆಟ್ಟಿಲು ಬಳಿ ನಿಧನರಾದರು ಎಂದು ವರದಿಯಾಗಿದೆ. ಶೆರ್ಪಾ ರಕ್ಷಣಾ ತಂಡದಿಂದ ಕೆಳಗಿಳಿದ ನಂತರ ಸಂದೀಪ್ ಅರೆ ಅವರನ್ನು ಕ್ಯಾಂಪ್ ನಲ್ಲಿ ನಿಧನರಾದರು. 21 ವರ್ಷದ ಸಾನಿಕಾ ಶಾ ಮತ್ತು ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಮಹಿಳಾ ಪರ್ವತಾರೋಹಣ ತಂಡ ಸೇರಿದಂತೆ ಹಲವಾರು ಭಾರತೀಯರು ಎವರೆಸ್ಟ್ ಶಿಖರಗಳನ್ನು ಯಶಸ್ವಿಯಾಗಿ ಏರಿದ ಬೆನ್ನಲ್ಲೇ ಈ ಸಾವುಗಳು ಸಂಭವಿಸಿವೆ. ಖುಂಬು ಹಿಮಪಾತದಲ್ಲಿನ ವಿಳಂಬದಿಂದಾಗಿ ಮಾರ್ಗ ತೆರೆಯುವಿಕೆ ಮತ್ತು ಲೋಡ್–ಫೆರಿ ಕಾರ್ಯಾಚರಣೆಗಳ ಮೇಲೆ ಒತ್ತಡ ಉಂಟಾದ ಕ್ಲೈಂಬಿಂಗ್ ಸೀಸನ್ ತಡವಾಗಿ ಪ್ರಾರಂಭವಾದ ನಂತರ ಬುಧವಾರ ನೇಪಾಳ ಕಡೆಯಿಂದ (ದಕ್ಷಿಣ ಬೇಸ್ ಕ್ಯಾಂಪ್) ಒಂದೇ ದಿನದಲ್ಲಿ ದಾಖಲೆಯ 274 ಪರ್ವತಾರೋಹಿಗಳು ಮೌಂಟ್ ಎವರೆಸ್ಟ್ ಶಿಖರವನ್ನು ತಲುಪಿದ್ದಾರೆ. ಶಿಖರಕ್ಕೆ ಪ್ರವೇಶವನ್ನು ಸಕ್ರಿಯಗೊಳಿಸುವಲ್ಲಿ ಪ್ರಮುಖ ಹೆಜ್ಜೆಯಾದ ರೋಪ್–ಫಿಕ್ಸಿಂಗ್ ಮೇ 13 ರಂದು ಪೂರ್ಣಗೊಂಡಿತು, ಇದು ಈ ವರ್ಷದ ಕ್ಲೈಂಬಿಂಗ್ ಸೀಸನ್‌ನ ಅಧಿಕೃತ ಆರಂಭವನ್ನು ಸೂಚಿಸುತ್ತದೆ. ನೇಪಾಳದ ಅಧಿಕಾರಿಗಳು ಮೌಂಟ್ ಎವರೆಸ್ಟ್ ಅನ್ನು ಹತ್ತಲು 493 ಪರವಾನಗಿಗಳನ್ನು ನೀಡುವುದರೊಂದಿಗೆ ಈ ವರ್ಷ ಮೌಂಟ್ ಎವರೆಸ್ಟ್‌ನಲ್ಲಿ ದಾಖಲೆಯ ವರ್ಷವಾಗಲಿದೆ ಎಂದು ನಿರೀಕ್ಷಿಸಲಾಗಿದೆ. 1953 ರಲ್ಲಿ ಮೊದಲ ಬಾರಿಗೆ ಟೆನ್ಸಿಂಗ್ ನಾರ್ಗೆ ಮತ್ತು ಸರ್ ಎಡ್ಮಂಡ್ ಹಿಲರಿ ಅವರು ಪರ್ವತವನ್ನು ಯಶಸ್ವಿಯಾಗಿ ಏರಿದ ನಂತರ ಒಂದು ವರ್ಷದಲ್ಲಿ ನೀಡಲಾದ ಅತ್ಯಧಿಕ ಸಂಖ್ಯೆಯ ಪರವಾನಗಿಗಳು ಇದಾಗಿದೆ.

# "ಒಂದೇ ಸೂರಿನಡಿ ಶಿಕ್ಷಣದ ಕೆಪಿಎಸ್ ಶಾಲೆ ವಂಚಿತ ಗ್ರಾಮ"

ನೈಜ್ಯ ದೆಸೆ ನ್ಯೂಸ್

**ಪೋತ್ನಾಳ: ಮಾನ್ವಿ ತಾಲೂಕಿನ ಗ್ರಾಮ ಪಂಚಾಯತಿ ಕೇಂದ್ರ ಸ್ಥಾನ ಹೊಂದಿದ ಉಟಕನೂರು ಗ್ರಾಮ ಅದರ ವ್ಯಾಪ್ತಿಯಲ್ಲಿ ಮೊದಲ ಪ್ರೌಢ ಶಾಲೆ ಹೊಂದಿದ ಗ್ರಾಮವಾಗಿದೆ.**

2001–02 ಸಾಲಿನಲ್ಲಿ ಈ ಗ್ರಾಮದಲ್ಲಿ ಪ್ರೌಢ ಶಾಲೆ ಆರಂಭವಾಗಿ ಇಂದಿಗೆ 25 ವರ್ಷವಾದರೂ ಕಾಲೇಜು ಶಿಕ್ಷಣ ವ್ಯವಸ್ಥೆ ಹೊಂದಬೇಕಾಗಿದ್ದ ಈ ಗ್ರಾಮ ಪಂಚಾಯತಿ ಕಚೇರಿ ಹೊಂದಿದ್ದರೂ ಒಂದೇ ಸೂರಿನಲ್ಲಿ ನರ್ಸರಿಯಿಂದ ಕಾಲೇಜು ವರೆಗೆ ಉತ್ತಮ ಸೌಲಭ್ಯ ಜೊತೆಗೆ ಉತ್ತಮ ಶಿಕ್ಷಣ ಕೊಡಲು ಜಾರಿಗೆ ಬಂದ ಕರ್ನಾಟಕ ಪಬ್ಲಿಕ್ ಶಾಲೆ ವ್ಯವಸ್ಥೆಯಡಿ ಶಾಲೆಯಾಗಿ ಆಯ್ಕೆ ಆಗದಿರುವುದು ಬೇಸರ ತರಿಸಿದೆ.

ಈ ಗ್ರಾಮ ಸೇರಿದಂತೆ ಅದರ ವ್ಯಾಪ್ತಿಯ ಹಳ್ಳಿಗಳು ಉತ್ತಮ ಶಿಕ್ಷಣ ಆರೋಗ್ಯ ಮೂಲ ಸೌಕರ್ಯ ಹೊಂದುವಲ್ಲಿ ಇನ್ನೂ ಹಿಂದುಳಿದಿದ್ದು ಇಲ್ಲಿನ ಜನಪ್ರತಿನಿದಿನಗಳು ಮುಖಂಡರು ಬುದ್ದಿಜೀವಿಗಳು ವಿದ್ಯಾವಂತ ಪ್ರಬುದ್ಧ ಸಾರ್ವಜನಿಕರು ಊರಿನ ಕುರಿತು ಕನಿಷ್ಠ ಕಾಳಜಿ ತೋರಿಸದಿರುವುದು



ನಾಚಿಕೆಗೇಡಿನ ವಿಷಯವಾಗಿದೆ. ಇನ್ನೂ ಹಿರಿಯ ಪ್ರಾಥಮಿಕ ಶಾಲೆ ರಜತ ಮಹೋತ್ಸವ ಆಚರಿಸಿಕೊಂಡರೂ ಅಲ್ಲಿನ ಮೂಲ ಸೌಕರ್ಯ ಮರೀಚಿಕೆಯಾಗಿ ಮಳೆ ಬಂದರೆ ಸೋರುವ ಇಂದು ಅಥವಾ ನಾಳೆ ಬೀಳುವ ಕಟ್ಟಡಗಳನ್ನು ಹೊಂದಿವೆ. ಆರಂಭದಲ್ಲಿ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿದ್ದ ಈ ಶಾಲೆಗಳು ಈಗ ಸಂಖ್ಯೆ ಕುಸಿತವಾಗುತ್ತಿರುವುದು ಕಳವಳಕಾರಿಯಾದ ಸಂಗತಿಯಾಗಿದೆ. ಶಿಕ್ಷಕರ ಕೊರತೆ ಹಾಗೂ ಪುಟ್ಟ ಪುಟ್ಟ ಮಕ್ಕಳು ಬಹು ದೂರ ಭಾರವಾದ ಬ್ಯಾಗ್ ಹೊತ್ತು ನಡೆದುಕೊಂಡು ಹೋಗಲು ಶ್ರಮ ಪಡುವುದು ಅವರ ಬೆಳವಣಿಗೆ ಹಂತಕ್ಕೆ ಮಾರಕವಾಗಿದೆ.

ಗ್ಯಾರಂಟಿ ಭಾಗ್ಯ ಕೊಟ್ಟು ಉಚಿತ ಬಸ್ ಪ್ರಯಾಣಕ್ಕೆ ಅನುಕೂಲ ಕಾಣುತ್ತಿರುವ ಆಡಳಿತ ವ್ಯವಸ್ಥೆಯಲ್ಲಿ ಸಾರ್ವಜನಿಕ ಸಾರಿಗೆ ವ್ಯವಸ್ಥೆ ಕಾಣದ ಈ ಗ್ರಾಮ ಸೇರಿ ಪಂಚಾಯತಿಯ ಕೆಲವು ಗ್ರಾಮಗಳ ವಿದ್ಯಾರ್ಥಿಗಳು ಕಾಲೇಜು ಶಿಕ್ಷಣ ವಂಚಿತರಾಗಿ ಅರ್ಧಕ್ಕೆ ಕಲಿಕೆ ನಿಲ್ಲಿಸಿ ದುಡಿಮೆಗೆ ಕಡೆಗೆ ಮುಖ ಮಾಡಿದ್ದಾರೆ. ಇನ್ನೂ ಕೆಲವರು ಜೀವ ಕೈಯಲ್ಲಿ ಹಿಡಿದು ಖಾಸಗಿ ವಾಹನಗಳ ಮೂಲಕ ಶಿಕ್ಷಕಣಕ್ಕಾಗಿ ನಗರ ಪಟ್ಟಣಗಳ ಕಡೆ ಸಂಚಾರ ಮಾಡಲೇಬೇಕಾಗಿದೆ. ಇಲ್ಲಿನ ಶಿಕ್ಷಣ ಅಭಿಮಾನಿಗಳು ಊರಿನ ಮುಖಂಡರು ಜನಪ್ರತಿನಿದಿನಗಳು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಸ್ಥಳೀಯ ಸಚಿವರು ಶಾಸಕರು ಸಂಸದರ ಗಮನಕ್ಕೆ ತಂದು ಸರ್ಕಾರಕ್ಕೆ ಮನವರಿಕೆ ಮಾಡಿದ್ದರೆ ಇಸ್ಟೊತ್ತಿಗೆ ಗ್ರಾಮ ಪಂಚಾಯತಿ ಕೇಂದ್ರ ಸ್ಥಾನದಲ್ಲಿ ಕಾಲೇಜು ಶಿಕ್ಷಣ ಸಿಕ್ಕಿ ವಿದ್ಯಾರ್ಥಿಗಳಿಗೆ ಪ್ರಯಾಸ ಪಟ್ಟು ನಗರ ಪಟ್ಟಣಗಳಿಗೆ ಅಲೆದು ಸಮಯ ಆರೋಗ್ಯ ಹಾಳು ಮಾಡಿಕೊಂಡು ಶಿಕ್ಷಣ ಪಡೆಯುವ ಪ್ರಮೇಯ ಬರುತ್ತಿರಲಿಲ್ಲ.

ಇನ್ನಾದರೂ ವಿದ್ಯಾವಂತರು ಪ್ರಬುದ್ಧರು ಗ್ರಾಮದ ಅಭಿರುದ್ಧಿ ಕುರಿತು ಯೋಚಿಸಿ ಮಕ್ಕಳ ಶಿಕ್ಷಣ ಕ್ಷೇತ್ರಕ್ಕೆ ಸುಧಾರಣೆ ತರಲು ಮುಂದಾಗಬೇಕು. "ಉಟಕನೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಮೊದಲ ಪ್ರೌಢ ಶಾಲೆ" ಹೊಂದಿದ್ದು ಇವರೆಗೆ ಕಾಲೇಜು ಶಿಕ್ಷಣ ದೊರೆಯದೆ ವಿದ್ಯಾರ್ಥಿಗಳು ಹೆಚ್ಚಿನ ವಿದ್ಯಾಭ್ಯಾಸದಿಂದ ವಂಚಿತರಾಗುತ್ತಿದ್ದಾರೆ. ಇದನ್ನು ಗಮನಿಸಿ ಜನಪ್ರತಿನಿದಿನಗಳು ಕಾಲೇಜು ಮಂಜೂರು ಮಾಡಲು ಶ್ರಮಿಸಬೇಕು.

**:ಶರಬಣ್ಣ ಕುಂಬಾರ ಗ್ರಾಮಸ್ಥರು**

## ವಿಶ್ವಕರ್ಮ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಮೇ 31 ರಂದು ಕೆ ಪಿ ನಂಜುಂಡಿ ವಿಶ್ವಕರ್ಮ ನೇತೃತ್ವದಲ್ಲಿ ಪ್ರತಿಭಾ ಪುರಸ್ಕಾರ

ನೈಜ್ಯ ದೆಸೆ ನ್ಯೂಸ್

**ಸಿರುಗುಪ್ಪ: ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಬೆಂಗಳೂರು ವತಿಯಿಂದ ಮಾಜಿ ವಿಧಾನ ಪರಿಷತ್ ಸದಸ್ಯರು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ರಾಜ್ಯಾಧ್ಯಕ್ಷರಾದ ಕೆ ಪಿ ನಂಜುಂಡಿ ವಿಶ್ವಕರ್ಮ ಅವರ ಸಾರಥ್ಯದಲ್ಲಿ 2025–2026 ನೇ ಸಾಲಿನ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಶೇ. 75 ಕ್ಕಿಂತ ಹೆಚ್ಚು ಅಂಕಗಳಿಸಿದ ವಿಶ್ವಕರ್ಮ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ.**



ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಇದೇ ಮೇ 31 ರಂದು ಬೆಂಗಳೂರಿನ ಟೌನ್ ಹಾಲ್ ನ ಪುಟ್ಟಣ್ಣ ಶೆಟ್ಟಿ ಪುರಭವನದಲ್ಲಿ ನಡೆಸಲಾಗುತ್ತಿದೆ ವಿಶ್ವಕರ್ಮ ಸಮಾಜದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಇದರಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಸಂಬಂಧ ಪಟ್ಟ ಅಂಕಪಟ್ಟಿ ಜಾತಿ ಪ್ರಮಾಣ ಪತ್ರ ಶಾಲಾ ವರ್ಗಾವಣೆ ಪ್ರಮಾಣ ಪತ್ರ ಭಾವಚಿತ್ರ ಖಾಯಂ ವಿಳಾಸ ಹಾಗೂ ಮೊಬೈಲ್ ಸಂಖ್ಯೆಯನ್ನು ಈ ಕೆಳಗಿನ ಕೆ. ಸುಂದರ್ ಅವರ ವಾಟ್ಸಾಪ್ ನಂಬರ್ 9886423935 ಗೆ ವಾಟ್ಸಾಪ್ ಮಾಡಬೇಕು ಮತ್ತು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಾಗ ಜೆರಾಕ್ಸ್ ಪ್ರತಿಗಳನ್ನು ತರಬೇಕೆಂದು ಸಿರುಗುಪ್ಪ ತಾಲೂಕು ಅಧ್ಯಕ್ಷರಾದ ಮೌನೇಶ್ ಆಚಾರಿ ಅವರು ಸಮಾಜದ ಬಂಧುಗಳಿಗೆ ಮನವಿ ಮಾಡಿದರು.

ವರದಿ : ಮಸೀದಿ,ಅಬ್ದುಲ್ ಗೌಸ್, ಸಿರುಗುಪ್ಪ

## ಬೆಂಗಳೂರು–ಮುಂಬೈ ನ್ಯೂ ಸ್ಲೀಪರ್ ವಂದೇಭಾರತ ರೈಲು ಸಂಚಾರ ಖಚಿತ: ಡಾ.ಬಾಬುರಾವ್

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಬೆಂಗಳೂರು– ಮುಂಬೈ ಮಧ್ಯ ಹೊಸ ಸ್ಲೀಪರ್ ವಂದೇ ಭಾರತ ರೈಲು ಸಂಚರಿಸುವುದನ್ನು ರೈಲ್ವೆ ಇಲಾಖೆ ಖಚಿತ ಪಡಿಸಿದೆ ಎಂದು ರೈಲ್ವೆ ಸಲಹಾ ಸಮಿತಿ ಮಾಜಿ ಸದಸ್ಯ ಡಾ. ಬಾಬುರಾವ್ ಅವರು ತಿಳಿಸಿದ್ದಾರೆ.**

ಈ ಕುರಿತು ಹೇಳಿಕೆ ನೀಡಿರುವ ಅವರು ಈ ರೈಲು ಬೆಂಗಳೂರಿನಿಂದ ಹೊರಟು, ಗುಂತಕಲ್, ರಾಯಚೂರು, ಕಲಬುರಗಿ, ಸೊಲ್ಲಾಪೂರ ಮಾರ್ಗವಾಗಿ ಸಂಚರಿಸಲಿದೆ. ಟಿಕೆಟ್ ದರ ಮೂರನೇ ದರ್ಜೆ ಏಸಿಗೆ ಪ್ರತಿ ಕಿ.ಮೀಗೆ ಜಿಎಸ್ ಟಿ ಸೇರಿ ರೂ. ದ್ವಿತೀಯ ದರ್ಜೆ ಏಸಿಗೆ 3.10 ರೂ. ಪ್ರಥಮ ದರ್ಜೆ ಏಸಿಗೆ 3.80 ರೂ. ನಿಗದಿಪಡಿಸಲಾಗಿದೆ. ರೈಲು ಸಂಚಾರದ ದಿನಾಂಕವನ್ನು ಶೀಘ್ರದಲ್ಲಿ ಪ್ರಕಟಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.




ಈ ರೈಲು ಉದ್ಯಾನ ಗಿಂತ 9 ಕ್ಕಿಂತ ಹೆಚ್ಚು ತಾಸು ಉಳಿತಾಯ ಮಾಡಲಿದೆ. ಉದ್ಯಾನ ಎಕ್ಸ್ ಪ್ರೆಸ್ ಬಿಟ್ಟರೆ ಬೆಂಗಳೂರಿನಿಂದ ಮುಂಬೈಗೆ ಸಂಚರಿಸಲು 30 ವರ್ಷಗಳಿಂದ ಬೇರೆ ಯಾವುದೇ ರೈಲುಗಳ ಸೌಲಭ್ಯ ಇರಲಿಲ್ಲ. ಈಗ ಬೆಂಗಳೂರು–ಮುಂಬೈ ನ್ಯೂ ಸ್ಲೀಪರ್ ವಂದೇಭಾರತ ರೈಲು ಸಂಚಾರದಿಂದಾಗಿ ಮತ್ತೊಂದು ರೈಲಿನ ಸೌಲಭ್ಯ ದೊರೆದಂತಾಗಿದೆ. ಜೊತೆಗೆ ಈ ಭಾಗದ 30 ವರ್ಷದ ಕನಸು ನನಸಾದಂತಾಗಿದೆ ಎಂದು ಅವರು ಹರ್ಷ ವ್ಯಕ್ತಪಡಿಸಿದ್ದಾರೆ. ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ರಾಜ್ಯ ರೈಲ್ವೆ ಖಾತೆ ಸಚಿವ ವಿ.ಸೋಮಣ್ಣ ಅವರಿಗೆ ಈ ರೈಲು ಸೌಲಭ್ಯವನ್ನು ಈ ಭಾಗಕ್ಕೆ ಒದಗಿಸಬೇಕೆಂದು ನಿರಂತರವಾಗಿ ಮನವಿ ಮಾಡುತ್ತ ಬರಲಾಗಿತ್ತು. ಈಗ ನಮ್ಮ ಮನವಿಗೆ ಸ್ಪಂದನೆ ಸಿಕ್ಕಿದ್ದು ಉಭಯ ಸಚಿವರು ಅಭಿನಂದನಾರ್ಹರು ಎಂದು ಹೇಳಿದ್ದಾರೆ.

# ಮತ್ತೆ ಇಂಧನ ದರ ಏರಿಕೆ: 10 ದಿನಗಳಲ್ಲಿ ಮೂರನೇ ಬಾರಿಗೆ ಹೆಚ್ಚಳ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಇಂದು ಮತ್ತೆ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳು ಏರಿಕೆಯಾಗಿವೆ. ಪೆಟ್ರೋಲ್ ಮೇಲೆ 87 ಪೈಸೆ ಮತ್ತು ಡೀಸಲ್ ದರಗಳಲ್ಲಿ ಲೀಟರ್‌ಗೆ 91 ಪೈಸೆಯವರೆಗೆ ಹೆಚ್ಚಿಸಲಾಗಿದೆ. ಇದು 10 ದಿನಗಳಿಗಿಂತ ಕಡಿಮೆ ಅವಧಿಯಲ್ಲಿ ಮೂರನೇ ಹೆಚ್ಚಳವಾಗಿದೆ. ದೆಹಲಿಯಲ್ಲಿ ಪೆಟ್ರೋಲ್ ಬೆಲೆಯನ್ನು ಲೀಟರ್‌ಗೆ 98.64 ರೂ.ಗಳಿಂದ 99.51 ರೂ.ಗಳಿಗೆ 87 ಪೈಸೆ ಹೆಚ್ಚಿಸಲಾಗಿದೆ. ಡೀಸೆಲ್ ದರಗಳು 91.58 ರೂ.ಗಳಿಂದ 92.49 ರೂ.ಗಳಿಗೆ 91 ಪೈಸೆ ಹೆಚ್ಚಿಸಲಾಗಿದೆ.**

ಪಶ್ಚಿಮ ಏಷ್ಯಾ ಸಂಘರ್ಷದಿಂದ ಉಂಟಾದ ಹೆಚ್ಚಿದ ಇಂಧನ ಬೆಲೆಗಳನ್ನು ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು ಮಾಪನಾಂಕ ನಿರ್ಣಯಿಸಿದ ರೀತಿಯಲ್ಲಿ ವರ್ಗಾಯಿಸಲು ಪ್ರಾರಂಭಿಸಿದ ಮೇ 15 ರಿಂದ ಇದು ಮೂರನೇ ದರ ಏರಿಕೆಯಾಗಿದೆ. ಮೇ 15 ರಂದು ಬೆಲೆಗಳನ್ನು ಲೀಟರ್‌ಗೆ 3 ರೂ.ಗಳಷ್ಟು ಹೆಚ್ಚಿಸಲಾಯಿತು, ನಂತರ ಮೇ 19 ರಂದು 90 ಪೈಸೆ ಹೆಚ್ಚಳವಾಯಿತು. ಒಟ್ಟಾರೆಯಾಗಿ, ದರಗಳು ಲೀಟರ್‌ಗೆ ಸುಮಾರು 5 ರೂ.ಗಳಷ್ಟು ಹೆಚ್ಚಾಗಿದೆ. ಕೋಲ್ಕತ್ತಾದಲ್ಲಿ ಪೆಟ್ರೋಲ್ 110.57 ರೂ. ಡೀಸೆಲ್ 96.04 ರೂ.



ಆಗಿದೆ. ಮುಂಬೈನಲ್ಲಿ ಪೆಟ್ರೋಲ್ 107.56 ರೂ. ಡೀಸೆಲ್, 94.05 ರೂ.ಚೆನ್ನೈನಲ್ಲಿ ಪೆಟ್ರೋಲ್ 104.54 ರೂ. ಡೀಸೆಲ್ 96.16 ರೂ. ಆಗಿದೆ.

ದರ ಏರಿಕೆಗೆ ಅಸಲಿ ಕಾರಣವೇನು ಮಧ್ಯಪ್ರಾಚ್ಯದಲ್ಲಿ ತಲೆದೂರಿರುವ ಯುದ್ಧದ ವಾತಾವರಣ ಮತ್ತು ಯುಎಸ್–ಇರಾನ್ ನಡುವಿನ ಶಾಂತಿ ಮಾತುಕತೆಗಳ ಸುತ್ತಲಿನ ಅನಿಶ್ಚಿತತೆಯೇ ಈ ಬೆಲೆ ಏರಿಕೆಗೆ ಪ್ರಮುಖ ಕಾರಣವಾಗಿದೆ. ಇದರಿಂದಾಗಿ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆಗಳು ತೀವ್ರ ಏರಿಳಿತ ಕಾಣುತ್ತಿವೆ. ಬ್ರೆಂಟ್ ಕಚ್ಚಾ ತೈಲದ ಬೆಲೆ ಬ್ಯಾರೆಲ್‌ಗೆ 104 ಡಾಲರ್‌ಗಿಂತ ಹೆಚ್ಚಾಗಿದ್ದರೆ, ಯುಎಸ್ ವೆಸ್ಟ್ ಟೆಕ್ಸಾಸ್ ಇಂಟರ್ಮೀಡಿಯೇಟ್ ಕಚ್ಚಾ ತೈಲವು ಬ್ಯಾರೆಲ್‌ಗೆ 97 ಡಾಲರ್ ಆಸುಪಾಸಿನಲ್ಲಿ ವಹಿವಾಟು ನಡೆಸಿದೆ. ಜಾಗತಿಕ ಪೂರೈಕೆಯ ಕಳವಳಗಳ ಮಧ್ಯೆ ಒಂದು ಹಂತದಲ್ಲಿ ಕಚ್ಚಾ ತೈಲದ ಬೆಲೆ ಬ್ಯಾರೆಲ್‌ಗೆ ಬರೋಬ್ಬರಿ 111 ಡಾಲರ್‌ಗೆ ತಲುಪಿದೆ. ತೈಲ ಕಂಪನಿಗಳಿಗೆ ಆಗ್ತಿದ್ದ ಭಾರಿ ನಷ್ಟ ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ತೈಲ ಬೆಲೆಗಳು ಸತತವಾಗಿ ಏರುತ್ತಿದ್ದರೂ, ಭಾರತದ ಸರ್ಕಾರಿ ಸ್ವಾಮ್ಯದ ತೈಲ ಮಾರುಕಟ್ಟೆ ಕಂಪನಿಗಳು ತಿಂಗಳುಗಳಿಂದ ದೇಶೀಯ ಇಂಧನ ಬೆಲೆಗಳನ್ನು ಬದಲಾಯಿಸದೆ ಗ್ರಾಹಕರಿಗೆ ನೆರವಾಗಿದ್ದವು.

ಆದರೆ, ಈ ಅವಧಿಯಲ್ಲಿ ಸಾರ್ವಜನಿಕ ವಲಯದ ತೈಲ ಕಂಪನಿಗಳು ಪ್ರತಿ ತಿಂಗಳು ಸುಮಾರು 1,000 ಕೋಟಿ ರೂ.ಗಳಷ್ಟು ಭಾರಿ ನಷ್ಟವನ್ನು ಅನುಭವಿಸುತ್ತಿದ್ದವು. ಹೀಗಾಗಿ ನಷ್ಟದ ಹೊರೆಯನ್ನು ತಗ್ಗಿಸಲು ಈಗ ಬೆಲೆ ಪರಿಷ್ಕರಣೆಯ ಮೂಲಕ ಆ ಹೊರೆಯ ಒಂದು ಭಾಗವನ್ನು ಗ್ರಾಹಕರ ಮೇಲೆ ವರ್ಗಾಯಿಸಲು ಕಂಪನಿಗಳು ಆರಂಭಿಸಿವೆ. ಇಂಧನ ಆಘಾತ ಎದುರಿಸಲು ಭಾರತ ಸಜ್ಜು: ಹರ್ದೀಪ್ ಸಿಂಗ್ ಪುರಿ ಇತ್ತೀಚೆಗೆ ನಡೆದ ಸಿಐಐ ವಾರ್ಷಿಕ ವ್ಯವಹಾರ ಶೃಂಗಸಭೆ 2026 ರಲ್ಲಿ ಮಾತನಾಡಿದ್ದ ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅವರು, ಯಾವುದೇ ಕೊರತೆಯಾಗದಂತೆ ದೇಶಾದ್ಯಂತ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿಯ ತಡೆರಹಿತ ಲಭ್ಯತೆಯನ್ನು ಖಚಿತಪಡಿಸಲಾಗಿದ್ದು, ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸಲು ದೇಶೀಯ ಎಲ್‌ಪಿಜಿ ಉತ್ಪಾದನೆಯನ್ನು ಗಮನಾರ್ಹವಾಗಿ ಹೆಚ್ಚಿಸಲಾಗಿದೆ ಎಂದು ಅವರು ತಿಳಿಸಿದ್ದರು. ಆದರೂ ಅನಿವಾರ್ಯವಾಗಿ ಇಂಧನ ಬೆಲೆ ಮೂರನೇ ಬಾರಿಗೆ ಏರಿಕೆಯಾಗಿದೆ.

# ಸನ್ ರೈಸ್ ಕಾಲೇಜಿನ ಶನಿವಾರದ ವಿಶೇಷ ಉಪನ್ಯಾಸ ನೀಡಿದ ಡಾ.ನಾಗರಾಜ್ ಎಸ್ ಮಾಲಿ ಪಾಟೀಲ್

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ನಗರದ ಸನ್ ರೈಸ್ ಡಿ ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಕಾಲೇಜು ವತಿಯಿಂದ ಪ್ರತೀ ಶನಿವಾರದಂತೆ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ದಿನಾಂಕ 23 ಮೇ ಶನಿವಾರ ಯಶಸ್ವಿಯಾಗಿ ಆಯೋಜಿಸಲಾಯಿತು.**

ಈ ಕಾರ್ಯಕ್ರಮಕ್ಕೆ ಚೇತನ್ ಆಸ್ಪತ್ರೆ ಸಿಂಧನೂರಿನ ಖ್ಯಾತ ತಜ್ಞ ವೈದ್ಯರಾದ ಡಾ. ನಾಗರಾಜ್ ಎಸ್. ಮಾಲಿಪಾಟೀಲ್ (MBBS, MRCP(U.K), MRCP in General Medicine (England), MRCP in Endocrinology & PhD in Diabetes ? Diabetes, Sugar, Heart, Thyroid & General Medicine Specialist) ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ಮಹತ್ವದ ಮಾರ್ಗದರ್ಶನ ನೀಡಿದರು.ಕಾರ್ಯಕ್ರಮದಲ್ಲಿ "ದೇಹದ ದ್ರವಗಳು ಮತ್ತು ಎಲೆಕ್ಟ್ರೋಲೈಟ್ ಅಸಮತೋಲನ" ಎಂಬ ವಿಷಯದ ಕುರಿತು ಅವರು ಸಮಗ್ರ ಹಾಗೂ ಉಪಯುಕ್ತ ಮಾಹಿತಿಯನ್ನು ಹಂಚಿಕೊಂಡರು.

ದೇಹದಲ್ಲಿ ನೀರು, ಸೋಡಿಯಂ, ಪೊಟ್ಯಾಸಿಯಂ, ಕ್ಯಾಲ್ಸಿಯಂ ಮುಂತಾದ




ಎಲೆಕ್ಟ್ರೋಲೈಟ್‌ಗಳ ಸಮತೋಲನ ಆರೋಗ್ಯದ ದೃಷ್ಟಿಯಿಂದ ಎಷ್ಟು ಮುಖ್ಯ ಎಂಬುದನ್ನು ವಿವರಿಸಿದ ಅವರು, ಈ ಅಸಮತೋಲನದಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳು, ಅವುಗಳ ಲಕ್ಷಣಗಳು, ಚಿಕಿತ್ಸೆ ವಿಧಾನಗಳು ಹಾಗೂ ಮುನ್ನೆಚ್ಚರಿಕಾ ಕ್ರಮಗಳ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು.ಡಾ. ನಾಗರಾಜ್ ಎಸ್. ಮಾಲಿಪಾಟೀಲ್ ಅವರು ಮಾತನಾಡಿ, "ಆರೋಗ್ಯ ಕ್ಷೇತ್ರದಲ್ಲಿ ನರ್ಸಿಂಗ್ ವಿದ್ಯಾರ್ಥಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ವೈದ್ಯಕೀಯ ಸೇವೆಯಲ್ಲಿ ವೈದ್ಯರ ಜೊತೆಗೆ ನರ್ಸ್‌ಗಳು ರೋಗಿಗಳ ಆರೈಕೆಯಲ್ಲಿ ಪ್ರಮುಖ ಸ್ಥಾನ ಹೊಂದಿದ್ದಾರೆ.

ಕೇವಲ ಪಠ್ಯ ಪುಸ್ತಕದ ಜ್ಞಾನ ಮಾತ್ರವಲ್ಲದೆ ಪ್ರಾಯೋಗಿಕ ಅನುಭವ, ಮಾನವೀಯತೆ, ಸೇವಾಭಾವ ಮತ್ತು ಆತ್ಮವಿಶ್ವಾಸವೂ ವಿದ್ಯಾರ್ಥಿಗಳಲ್ಲಿ ಇರಬೇಕು. ಉತ್ತಮ ನರ್ಸ್‌ಗಳು ಸಮಾಜದ ಆರೋಗ್ಯ ರಕ್ಷಣೆಯ ನಿಜವಾದ ಶಕ್ತಿಯಾಗಿದ್ದಾರೆ" ಎಂದು ಹೇಳಿದರು.ಇದೇ ವೇಳೆ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, "ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ನಿರಂತರ ಅಧ್ಯಯನ, ಶಿಸ್ತು ಹಾಗೂ ಕಠಿಣ ಪರಿಶ್ರಮದ ಮೂಲಕ ತಮ್ಮ ಗುರಿಯನ್ನು ಸಾಧಿಸಬೇಕು. ವೈದ್ಯಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುವ ಅವಕಾಶ ದೊರೆಯುವುದು ಒಂದು ಭಾಗ್ಯ. ಪ್ರತಿಯೊಬ್ಬ







ವಿದ್ಯಾರ್ಥಿಯೂ ತಮ್ಮ ವೃತ್ತಿಯನ್ನು ಗೌರವದಿಂದ ಸ್ವೀಕರಿಸಿ ಸಮಾಜಕ್ಕೆ ಉತ್ತಮ ಸೇವೆ ನೀಡಬೇಕು" ಎಂದು ಪ್ರೇರಣಾದಾಯಕ ಮಾತುಗಳನ್ನಾಡಿದರು.

ಉಪನ್ಯಾಸ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಹೆಚ್ಚಿನ ಉತ್ಸಾಹದಿಂದ ಭಾಗವಹಿಸಿ ವಿವಿಧ ಪ್ರಶ್ನೆಗಳನ್ನು ಕೇಳಿ ಮಾಹಿತಿ ಪಡೆದರು. ಡಾ. ನಾಗರಾಜ್ ಅವರ ಉಪನ್ಯಾಸ ವಿದ್ಯಾರ್ಥಿಗಳಲ್ಲಿ ವೈದ್ಯಕೀಯ ಜ್ಞಾನವನ್ನು ಹೆಚ್ಚಿಸುವುದರ ಜೊತೆಗೆ ಆತ್ಮವಿಶ್ವಾಸವನ್ನೂ ವೃದ್ಧಿಸಿತು.ಈ ಸಂದರ್ಭದಲ್ಲಿ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾದ ಆಸಿಫ್ ಅವರು ಮಾತನಾಡಿ, ನಮ್ಮ "ಸನ್ ರೈಸ್ ವಿದ್ಯಾ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಕೇವಲ ಪಠ್ಯ ಶಿಕ್ಷಣವಷ್ಟೇ ಅಲ್ಲದೆ ಆರೋಗ್ಯ, ವೈದ್ಯಕೀಯ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ಸಂಬಂಧಿಸಿದ ವಿಶೇಷ ಉಪನ್ಯಾಸಗಳನ್ನು ನಿರಂತರವಾಗಿ ಆಯೋಜಿಸಲಾಗುತ್ತಿದೆ.ಇಂದಿನ ಉಪನ್ಯಾಸ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಅತ್ಯಂತ ಉಪಯುಕ್ತವಾಗಿದ್ದು, ಖ್ಯಾತ ವೈದ್ಯರಾದ ಡಾ. ನಾಗರಾಜ್ ಎಸ್. ಮಾಲಿಪಾಟೀಲ್ ಅವರು ನೀಡಿದ ಮಾರ್ಗದರ್ಶನ ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣಕ್ಕೆ ಸಹಕಾರಿಯಾಗಲಿದೆ. ಸಂಸ್ಥೆಯ ಪರವಾಗಿ ಅವರಿಗೆ ತುಂಬು ಹೃದಯದ ಧನ್ಯವಾದಗಳನ್ನು ತಿಳಿಸುತ್ತೇವೆ" ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರಾದ ರಾಜೇಶ್, ಅಶು ಪಾಷಾ, ಸಂತೋಷಿ ವೀರೇಶ್ವರಿ ಚೈತ್ರ ಸುಧಾ, ವೀರೇಶ್ ಶೋಭಾ ರಾಧಿಕಾ, ಸುರೇಶ್ ಯಾದವ್, ದಿಲೀಪ್, ಹರ್ಷಿತಾ ಹಾಗೂ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕಾರ್ಯಕ್ರಮ ಯಶಸ್ವಿಗೊಳಿಸಿದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

# ಐಟಿಐ ಸರ್ವೇಯರ್

ಐಟಿಐ ಸರ್ವೇಯರ್ ಎರಡು ವರ್ಷಗಳ ಉದ್ಯೋಗ ಆಧಾರಿತ ಕೋರ್ಸ್ ಆಗಿದ್ದು, ಇದು ಸಮೀಕ್ಷೆಗಳ ವಿವಿಧ ಅಂಶಗಳ ಬಗ್ಗೆ ಜ್ಞಾನವನ್ನು ನೀಡುತ್ತದೆ. ಇದು ನಿರ್ಮಾಣ ವಲಯದಲ್ಲಿ ತಾಂತ್ರಿಕ ಪ್ರಮಾಣೀಕರಣ ಕೋರ್ಸ್ ಆಗಿದ್ದು, ಇದು ಭೂ ಸಮೀಕ್ಷೆಯೊಂದಿಗೆ ವ್ಯವಹರಿಸುತ್ತದೆ. ಭೂಮಿಯ ಗಡಿಯನ್ನು ನಿರ್ಧರಿಸುವುದು ಸರ್ವೇಯರ್‌ನ ಪ್ರಮುಖ ಕೆಲಸ. ಕಟ್ಟಡಗಳು, ರಸ್ತೆಗಳು, ಸೇತುವೆಗಳು, ಮೇಲ್ಸೇತುವೆಗಳು ಇತ್ಯಾದಿಗಳ ನಿರ್ಮಾಣದಂತಹ ಯಾವುದೇ ನಿರ್ಮಾಣ ಉದ್ದೇಶಕ್ಕಾಗಿ ಭೂಮಿಯನ್ನು ಬಳಸಬಹುದು. ಯಾವುದೇ ನಿರ್ಮಾಣ ನಡೆಯಬೇಕಾದಾಗ, ಸರ್ವೇಯರ್‌ನ ಪಾತ್ರವು ಬಹಳ ಮುಖ್ಯವಾಗಿದೆ. ಕಟ್ಟಡ ಅಥ-ವಾ ಯಾವುದೇ ಇತರ ರಚನೆ ಸ್ಥಳದಲ್ಲಿದೆಯೇ ಅಥವಾ ಇಲ್ಲವೇ ಎಂಬುದನ್ನು ಸರ್ವೇಯರ್ ಖಚಿತಪಡಿಸಿಕೊಳ್ಳುತ್ತಾನೆ. ವೃತ್ತಿಯಾಗಿ ಸರ್ವೇಯರ್ ಬಹು ಜವಾಬ್ದಾರಿಗಳನ್ನು ಹೊಂದಿರುತ್ತಾನೆ. ಭೂ ಗಡಿಗಳನ್ನು ನಿರ್ಧರಿಸುವುದರ ಜೊತೆಗೆ ಭೂಮಾಪಕನು ನಕ್ಷೆಗಳನ್ನು ರಚಿಸುವುದು, ವಿನ್ಯಾಸಗೊಳಿಸುವುದು ಮತ್ತು ವಾಣಿಜ್ಯ ಉತ್ಪನ್ನಗಳು ಅಥವಾ ದೋಣಿಗಳು ಅಥವಾ ಕಟ್ಟಡಗಳಂತಹ ರಚನೆಗಳನ್ನು ಯೋಜಿಸುವ ಅಗತ್ಯವನ್ನು ಸಹ ಹೊಂದಿರುತ್ತಾನೆ. ತಂತ್ರಜ್ಞಾನದ ಪ್ರಗತಿಯೊಂದಿಗೆ ಸರ್ವೇಯರ್ ಪಾತ್ರ ಹೆಚ್ಚಾಗಿದೆ. ಇತ್ತೀಚಿನ ದಿನಗಳಲ್ಲಿ ಸರ್ವೇ ಕಾರ್ಯದಲ್ಲಿ ಸಾಕಷ್ಟು ತಂತ್ರಜ್ಞಾನವನ್ನು ಬಳಸಲಾಗುತ್ತಿದೆ. ನಿರ್ದಿಷ್ಟ ಭೂಮಿಯ ರಚನೆಯನ್ನು ನಿರ್ಧ-ರಿಸುವಲ್ಲಿ ಪ್ರಮುಖ ಪಾತ್ರ ವಹಿಸುವ ಭೂಮಿ, ಮಣ್ಣಿನ ಗುಣಮಟ್ಟ ಇತ್ಯಾದಿಗಳ ವಿವರಗಳನ್ನು ಪಡೆಯಲು ಈ ತಂತ್ರಜ್ಞಾನವು ನಮಗೆ ಅನುವು ಮಾಡಿಕೊಡುತ್ತದೆ. ನಿರ್ದಿಷ್ಟ ಸಮಯದ ಚೌಕಟ್ಟಿನೊಳಗೆ ನಿರ್ದಿಷ್ಟ ರಚನೆಯ ಬಗ್ಗೆ ಅಖಂಡವಾಗಿರುವುದನ್ನು ಖಚಿತಪಡಿಸಿಕೊಳ್ಳಲು ಸರ್ವೇಯರ್ ಭೂಮಿಯ ಬಗ್ಗೆ ಸರಿಯಾದ ಮಾಹಿತಿಯನ್ನು ನೀಡುತ್ತಾರೆ. ಪ್ರಸ್ತುತ ಇರುವ ಎಲ್ಲಾ ರೀತಿಯ ಸರ್ವೇಯರ್‌ಗಳಲ್ಲಿ ಭೂ ಸರ್ವೇಯರ್‌ಗಳು ಪ್ರಮುಖರು. ಐಟಿಐ ಸರ್ವೇಯರ್ ಒಂದು ವೃತ್ತಿಪರ ಕೋರ್ಸ್ ಆಗಿದ್ದು ಅದು ವಿದ್ಯಾರ್ಥಿಗಳು ಖಾಸಗಿ ಮತ್ತು ಸರ್ಕಾರಿ ಉದ್ಯೋಗಗಳನ್ನು ಪಡೆಯಲು ಅನುವು ಮಾಡಿಕೊಡುತ್ತದೆ. ಐಟಿಐ ಸರ್ವೇಯರ್ ಭಾರತ ಸರ್ಕಾರದ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯದ ಅಡಿಯಲ್ಲಿ ಕುಶಲಕರ್ಮಿ ತರಬೇತಿ ಯೋಜನೆ (ಸಿಟಿಎಸ್) ಅಡಿಯಲ್ಲಿ ಬರುತ್ತದೆ. ಅರ್ಹತೆ : ವಿದ್ಯಾರ್ಥಿಗಳು 10 ನೇ ತರಗತಿಯಲ್ಲಿ ವಿಜ್ಞಾನ ಮತ್ತು ಗಣಿತ ಪತ್ರಿಕೆಗಳನ್ನು ಹೊಂದಿರಬೇಕು. ವಿದ್ಯಾರ್ಥಿಯ ವಯಸ್ಸು 14–40 ವರ್ಷಗಳ ನಡುವೆ ಇರಬೇಕು

# ಕೆಪಿಎಸ್ ಶಾಲೆಗೆ ಮಕ್ಕಳನ್ನು ಕಳುಹಿಸಲು ವಿರೋಧಿಸಿ ದೇವಸಮುದ್ರದಲ್ಲಿ ಗ್ರಾಮಸ್ಥರು, ವಿದ್ಯಾರ್ಥಿಗಳು ಮತ್ತು ಸಂಘಟನೆಯ ಪದಾಧಿಕಾರಿಗಳು ಪ್ರತಿಭಟನೆ

**ನೈಜ್ಯ ದೆಸೆ ನ್ಯೂಸ್**

**ಬಳ್ಳಾರಿ / ಕಂಪ್ಲಿ: ಎಐಡಿಎಸ್‌ಓ ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ನೇತೃತ್ವದಲ್ಲಿ ತಾಲ್ಲೂಕಿನ ದೇವಸಮುದ್ರ ಗ್ರಾಮದಲ್ಲಿ ಕೆಪಿಎಸ್ ಮ್ಯಾಗ್ನೆಟ್ ಹೆಸರಿನಲ್ಲಿ ಸರ್ಕಾರಿ ಕಿರಿಯ ಹಾಗೂ ಹಿರಿಯ ಪ್ರಾಥಮಿಕ ಶಾಲೆಗಳ ಮುಚ್ಚುವುದನ್ನು ವಿರೋಧಿಸಿ, ಶಾಲೆ ಮುಂದೆ ನಮ್ಮೂರ ಶಾಲೆ ನಮ್ಮಯ ಕಣ್ಮಣಿ ಎಂಬ ಬ್ಯಾನರ್ ಕಟ್ಟಿ ನಮ್ಮೂರ ಶಾಲೆ ನಮ್ಮೂರಲ್ಲಿ ಉಳಿಸಬೇಕೆಂದು ಆಗ್ರಹಿಸಿ ಹೋರಾಟ ನಡೆಸಿದರು.**




ಹೋರಾಟವನ್ನು ಉದ್ದೇಶಿಸಿ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ಜಿಲ್ಲಾ ಕಾರ್ಯದರ್ಶಿ ಕಂಬಳಿ ಮಂಜುನಾಥ ಮಾತನಾಡಿ... ಇಡೀ ರಾಜ್ಯಾದ್ಯಂತ ಕೆಪಿಎಸ್ ಮ್ಯಾಗ್ನೆಟ್ ಶಾಲೆ ಯೋಜನೆ ವಿರುದ್ಧ ಹೋರಾಟ ನಡೆಸುತ್ತಾ ಬಂದಿದ್ದಾರೆ. ಆದರೆ ಜನರ ತೀವ್ರ ವಿರೋಧದ ನಡುವೆಯೊ ರಾಜ್ಯ ಸರ್ಕಾರವು ತನ್ನ ಹಠಮಾರಿ ಧೋರಣೆ ಬಿಡದೆ ಕೆಪಿಎಸ್ ಶಾಲೆಗಳನ್ನು ಆರಂಭಿಸಲು ಮುಂದಾಗಿದ್ದು ಅತ್ಯಂತ ಖಂಡನೀಯ!,. ಇದರಿಂದಾಗಿ ಬಡವರ ಮಕ್ಕಳು ಓದುವ ಸರ್ಕಾರಿ ಶಾಲೆಗಳನ್ನು ಮುಚ್ಚಿ, ಶಿಕ್ಷಣದಿಂದ ವಂಚಿತರನ್ನಾಗಿಸುತ್ತಿದ್ದಾರೆ.. ಕೆಪಿ-ಎಸ್ ಮ್ಯಾಗ್ನೆಟ್ ಶಾಲೆ ಯೋಜನೆ ಅನ್ನುವುದು ಬರೀ ಬಣ್ಣ ಬಣ್ಣದ ಮಾತುಗಳಿಂದ ಕೂಡಿದ್ದು, ರೈತರ, ಕೂಲಿ ಕಾರ್ಮಿಕರ, ಬಡ ಮಧ್ಯಮ ವರ್ಗದ ಮಕ್ಕಳು 4–5ಕಿ.ಮೀ ದೂರ ಹೋಗಿ ಶಿಕ್ಷಣ ಪಡೆಯಲು ಹೇಗೆ ಸಾಧ್ಯ? ಹಳ್ಳಿಯಿಂದ ಹಳ್ಳಿಗೆ ಹೋಗಲು ಎಷ್ಟೋ ಕಡೆ ಸರಿಯಾದ ರಸ್ತೆ, ಬಸ್ ಸಂಪರ್ಕ ಇರುವುದಿಲ್ಲ, ಬೇರೆ ಬೇರೆ ಹಳ್ಳಿಗಳಿಗೆ ಹೋಗುವ ಸಂದರ್ಭದಲ್ಲಿ ಕಾಡು, ಮುಳ್ಳು ರಸ್ತೆಯಿಂದ ಸಣ್ಣ ಸಣ್ಣ ಮಕ್ಕಳು ಹೋಗಿ ಓದುವುದು ರೈತರ ಮಕ್ಕಳಿಗೆ ಅಸಾಧ್ಯ.? ಆದ್ದರಿಂದ ಬಡ ಪ್ರತಿಭಾವಂತ ವಿದ್ಯಾರ್ಥಿಗಳ ಶಿಕ್ಷಣದ ಹಿತಾಸಕ್ತಿಯಿಂದ ಸರ್ಕಾರಿ ಶಾಲೆಗಳನ್ನು ಮುಚ್ಚುವ ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಮುಂದುವರೆದು ಈ ದೇಶದ ಶಿಕ್ಷಣ-ಕ್ಕಾಗಿ ಹೋರಾಡಿದ ಮಹಾತ್ಮಾ ಜ್ಯೋತಿಬಾ ಫುಲೆ ಮತ್ತು ಸಾವಿತ್ರಿ ಬಾಯಿ ಫುಲೆ ಅವರು 200 ವರ್ಷಗಳ ಹಿಂದೆ ಮಹಿಳೆಯರು, ಶೋಷಿತರ ಮಕ್ಕಳಿಗೆ ಶಿಕ್ಷಣ ಪಡೆಯಲು ಸಾಧ್ಯವಿರಲಿಲ್ಲ. ಅಂತಹ ಪರಿಸ್ಥಿತಿಯಲ್ಲಿ ಅವರು ಹೋರಾಟ ಮಾಡಿ ಶಿಕ್ಷಣ ಎಲ್ಲರಿಗೂ ಶಿಕ್ಷಣ ಸಿಗೋತರ ಧ್ವನಿ ಎತ್ತಿದ್ದಾರೆ. ಅವರ ಹೋರಾಟದ ಸ್ಫೂರ್ತಿ ಇಂದು ನಾವು ಒಗ್ಗಟ್ಟಾಗಿ ಶಾಲೆ ಉಳಿಸಲು ಹೋರಾಟ ನಡೆಸಬೇಕು ಎಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಎಐಕೆ ಕೆಎಂಎಸ್ ರೈತ ಸಂಘಟನೆಯ ಜಿಲ್ಲಾ ಅಧ್ಯಕ್ಷರು ಗೋವಿಂದ, ಊರಿನ ಗ್ರಾಮಸ್ಥರಾದ , ತಿಪ್ಪೇಸ್ವಾಮಿ, ಕರಿಯಪ್ಪ, ಮಲ್ಲಿ, ಸಿದ್ದು, ಪೋಷಕರು ಭಾಗವಹಿಸಿದ್ದರು.




# ಬೈಕ್‌ಗೆ ಗೂಡ್ಸ್ ಆಟೋ ಡಿಕ್ಕಿ : ಬಿಎಸ್ಸಿ ವಿದ್ಯಾರ್ಥಿ ದುರ್ಮರಣ

**ನೈಜ್ಯ ದೆಸೆ ನ್ಯೂಸ್**

**ಬೆಂಗಳೂರು: ಬೈಕ್‌ಗೆ ಗೂಡ್ಸ್ ಆಟೋ ಡಿಕ್ಕಿ ಹೊಡೆದ ಪರಿಣಾಮ ಬಿಎಸ್ಸಿ ವಿದ್ಯಾರ್ಥಿ ಮೃತಪಟ್ಟಿರುವ ಘಟನೆ ಜ್ಞಾನಭಾರತಿ ಸಂಚಾರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಸುಶಾಂಕ್‌ನಾಯಕ್ (20) ಮೃತಪಟ್ಟ ವಿದ್ಯಾರ್ಥಿ. ಮೂಲತಃ ಶಿವಮೊಗ್ಗದವರಾದ ಈತ ಮಲ್ಲತ್ತಹಳ್ಳಿಯಲ್ಲಿ ವಾಸವಾಗಿದ್ದುಕೊಂಡು ನಗರದ ಕಾಲೇಜೊಂದರಲ್ಲಿ ಬಿಎಸ್ಸಿ ವ್ಯಾಸಂಗ ಮಾಡುತ್ತಿದ್ದರು.**



ಇಂದು ಬೆಳಗಿನ ಜಾವ 2 ಗಂಟೆ ಸುಮಾರಿನಲ್ಲಿ ಸುಶಾಂಕ್ ನಾಯಕ್ ಕೆಟಿಎಂ ಬೈಕ್‌ನಲ್ಲಿ ಔಟರ್ ರಿಂಗ್ ರೋಡ್ ಮೂಲಕ ಬರುತ್ತಿದ್ದಾಗ ಮಲ್ಲತ್ತಹಳ್ಳಿ ಬಸ್ ನಿಲ್ದಾಣದ ಕಲಾ ಗ್ರಾಮದ ಎದುರು ಗೂಡ್?ಸ ಆಟೋ ಡಿಕ್ಕಿ ಹೊಡೆದ ಪರಿಣಾಮ ಆತ ಕೆಳಗೆ ಬಿದ್ದು ಗಂಭೀರ ಗಾಯಗೊಂಡು ಮೃತಪಟ್ಟಿದ್ದಾನೆ. ಸುದ್ದಿ ತಿಳಿದು ಜ್ಞಾನಭಾರತಿ ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಕಲ್ಲಿದ್ದಲು ಗಣಿಯಲ್ಲಿ ಸ್ಫೋಟ ಚೀನಾದಲ್ಲಿ 82 ಮಂದಿ ಸಾವು, 9 ಮಂದಿ ನಾಪತ್ತೆ..!

**ನೈಜ್ಯ ದೆಸೆ ನ್ಯೂಸ್**

**ಚೀನಾ: ಉತ್ತರ ಭಾಗದಲ್ಲಿರುವ ಕಲ್ಲಿದ್ದಲು ಗಣಿಯೊಂದರಲ್ಲಿ ಸಂಭವಿಸಿದ ಭೀಕರ ಗ್ಯಾಸ್ ಸ್ಫೋಟದಲ್ಲಿ ಕನಿಷ್ಠ 82 ಮಂದಿ ಮೃತಪಟ್ಟಿದ್ದು, 9 ಮಂದಿ ನಾಪತ್ತೆಯಾಗಿದ್ದಾರೆ ಎಂದು ವರದಿಯಾಗಿದೆ. ಇತ್ತೀಚಿನ ದಿನಗಳಲ್ಲಿ ಸಂಭವಿಸಿದ ಅತ್ಯಂತ ಭೀಕರ ಗಣಿ ಅಪಘಾತಗಳಲ್ಲಿ ಇದು ಒಂದಾಗಿದೆ.**




ಚೀನಾದ ಶಾಂಗ್‌ಸಿ ಪ್ರಾಂತ್ಯದಲ್ಲಿರುವ ಟೊಂಗ್‌ಝೌ ಗ್ರೂಪ್‌ನ 'ಲಿಯುಶೆನ್ಯು' ಕಲ್ಲಿದ್ದಲು ಗಣಿಯಲ್ಲಿ ಈ ದುರಂತ ಸಂಭವಿಸಿದೆ.ಶುಕ್ರವಾರ ಸಂಜೆ 19:29 ಗಂಟೆಗೆ (ಸ್ಥಳೀಯ ಸಮಯ) ಈ ಸ್ಫೋಟ ಸಂಭವಿಸಿದೆ.ಸ್ಫೋಟದ ಸಮಯದಲ್ಲಿ ಗಣಿಯಲ್ಲಿ 247 ಕಾರ್ಮಿಕರು ಕರ್ತವ್ಯದಲ್ಲಿದ್ದರು.ಅವಶೇಷಗಳ ಅಡಿಯಲ್ಲಿ ಸಿಲುಕಿರುವವರ ಪತ್ತೆಗಾಗಿ ಮತ್ತು ರಕ್ಷಣೆಗಾಗಿ ತಂಡಗಳು ಶ್ರಮಿಸುತ್ತಿವೆ. ಸ್ಫೋಟದ ನಂತರ, ಚೀನಾ ಅಧ್ಯಕ್ಷ ಕ್ಸಿ ಜಿನ್ಪಿಂಗ್ ಅವರು ಬದುಕುಳಿದವರನ್ನು ರಕ್ಷಿಸಲು ಮತ್ತು ಗಾಯಗೊಂಡವರಿಗೆ ಚಿಕಿತ್ಸೆ ನೀಡಲು ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡುವಂತೆ ಕರೆ ನೀಡಿದ್ದಾರೆ. ಗಣಿಯಲ್ಲಿ ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಲ್ಲಿ ಯಾವುದೇ ರೀತಿಯ ಹಿಂಜರಿಕೆ ತೋರಬಾರದು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಚೀನಾ ಅಧ್ಯಕ್ಷ ಕ್ಸಿ ಜಿನ್ಪಿಂಗ್ ಅವರು ತಕ್ಷಣವೇ ಪೂರ್ಣ ಪ್ರಮಾಣದ ರಕ್ಷಣಾ ಕಾರ್ಯಾಚರಣೆಯನ್ನು ಕೈಗೊಳ್ಳುವಂತೆ ಮತ್ತು ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಅಲ್ಲದೆ, ಅಪಘಾತಕ್ಕೆ ನಿಖರ ಕಾರಣವೇನು ಎಂಬುದನ್ನು ಪತ್ತೆ ಹಚ್ಚಿ, ಜವಾಬ್ದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.ಪ್ರಸ್ತುತ ರಕ್ಷಣಾ ಕಾರ್ಯಾಚರಣೆ ಮತ್ತು ಘಟನೆಯ ತನಿಖೆ ಮುಂದುವರಿದಿದೆ.

# ಹಿರಿಯ ಪತ್ರಕರ್ತ ಅಲ್–ಹಾಜ್ ಎ. ಅಬ್ದುಲ್ ನಬಿ ಅವರಿಗೆ ಜನಸಾಗರದ ಮಧ್ಯೆ ಭಾವಪೂರ್ಣ ಅಂತಿಮ ವಿದಾಯ

**ನೈಜ್ಯ ದೆಸೆ ನ್ಯೂಸ್**

**ಸಿರುಗುಪ್ಪ: ಸುನ್ನೀ ಖಬರಸ್ತಾನ್ ದಲ್ಲಿ ಇಸ್ಲಾಮಿಕ್ ಧಾರ್ಮಿಕ ವಿಧಿವಿಧಾನಗಳೊಂದಿಗೆ ಅಂತ್ಯಕ್ರಿಯೆ ಮಾನವೀಯತೆ, ಸರಳತೆ ಹಾಗೂ ಸಮಾಜ ಸೇವೆಗೆ ಸಾವಿರಾರು ಜನರಿಂದ ಕಣ್ಣೀರಿನ ನಮನ ಸಿರುಗುಪ್ಪ: ನಗರದ 5ನೇ ವಾರ್ಡ್ ಸೌದಾಗರ್ ಮೊಹಲ್ಲಾದ ಇಬ್ರಾಹಿಂ ಮಂಜಿಲ್ ನಿವಾಸಿಯಾಗಿದ್ದ ಹಿರಿಯ ಪತ್ರಕರ್ತ, ಸಮಾಜಸೇವಕ ಹಾಗೂ ಅಪಾರ ಜನಪ್ರಿಯತೆ ಗಳಿಸಿದ್ದ ಅಲ್–ಹಾಜ್ ಎ. ಅಬ್ದುಲ್ ನಬಿ ಅವರ ಅಂತ್ಯಕ್ರಿಯೆ ಗುರುವಾರ ಅತ್ಯಂತ ಭಾವನಾತ್ಮಕ ವಾತಾವರಣದಲ್ಲಿ ನೆರವೇರಿತು.**

ಅವರ ನಿಧನದ ಸುದ್ದಿ ತಿಳಿಯುತ್ತಿದ್ದಂತೆಯೇ ಸಿರುಗುಪ್ಪ ಸೇ-ರಿದಂತೆ ಸುತ್ತಮುತ್ತಲಿನ ಪ್ರದೇಶಗಳಿಂದ ಸಾವಿರಾರು ಜನರು ಆಗಮಿಸಿ ಅಂತಿಮ ದರ್ಶನ ಪಡೆದು ಕಣ್ಣೀರಿನ ನಮನ ಸಲ್ಲಿಸಿದರು. ನಗರದ ಅನೇಕ ಗಣ್ಯರು, ಧಾರ್ಮಿಕ ಮುಖಂಡರು, ಪತ್ರಕರ್ತರು, ಸಮಾಜದ ಹಿರಿಯರು, ಬಂಧುಗಳು, ಸ್ನೇಹಿತರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಆಗಮಿಸಿ ಮರಹೂಂ ಅವರ ಜೀವನ ಸಾಧನೆಯನ್ನು ಸ್ಮರಿಸಿದರು. ಬೆಳಗ್ಗಿನಿಂದಲೇ ಇಬ್ರಾಹಿಂ ಮಂಜಿಲ್ ನಿವಾಸದ ಮುಂದೆ ಜನರ ದಟ್ಟಣೆ ಹೆಚ್ಚಾಗಿದ್ದು, ಪ್ರತಿಯೊಬ್ಬರ ಮುಖದಲ್ಲೂ ದುಃಖದ ಛಾಯೆ ಕಾಣಿಸಿತು. ಅಲ್–ಹಾಜ್ ಎ. ಅಬ್ದುಲ್ ನಬಿ ಅವರು



ಪತ್ರಿಕೋದ್ಯಮ,ಸಮಾಜ ಸೇವೆ, ಸಾಕ್ಷರತಾ ನಬಿ, ಪೋಸ್ಟ್ ಪೋರಂ ಸದಸ್ಯರು, ಕ್ಷೇತ್ರದಲ್ಲಿ ಹಲವು ವರ್ಷಗಳ ಕಾಲ ಸೇವೆ ಸಲ್ಲಿಸಿ, ತಮ್ಮ ಸತ್ಯನಿಷ್ಠೆ, ನಿಷ್ಪಕ್ಷಪಾತ ಧೋರಣೆ ಹಾಗೂ ಮಾನವೀಯ ಮೌಲ್ಯಗಳಿಂದ ಅಪಾರ ಗೌರವ ಗಳಿಸಿದ್ದರು.

ಅವರು ಯಾವುದೇ ಜಾತಿ, ಧರ್ಮ, ಭಾಷೆ ಅಥವಾ ಸಂಸ್ಕೃತಿಯ ಭೇದಭಾವವಿಲ್ಲದೆ ಪ್ರತಿಯೊಬ್ಬರನ್ನೂ ಸಮಾನವಾಗಿ ಕಾಣುತ್ತಿದ್ದರು. ಸಮಾಜದಲ್ಲಿ ಎಲ್ಲರೊಂದಿಗೆ ಆತ್ಮೀಯವಾಗಿ ಬೆರೆತು ಮಾತನಾಡುವ ಅವರ ಗುಣವೇ ಅವರಿಗೆ ವಿಶೇಷ ಗೌರವ ತಂದುಕೊಟ್ಟಿತ್ತು ಎಂದು ಅನೇಕರು ಸ್ಮರಿಸಿದರು. "ಅವರು ಎಂದಿಗೂ ಯಾರ ಮನಸ್ಸಿಗೂ ನೋವುಂಟು ಮಾಡುವ ಮಾತು ಆಡಲಿಲ್ಲ. ಸದಾ ಮೃದು ಸ್ವಭಾವದಿಂದ ಮಾತನಾಡುತ್ತಿದ್ದರು. ಸಹಾಯ ಕೇಳಿದ ಯಾರನ್ನೂ ಖಾಲಿಹಸ್ತದಿಂದ ಕಳುಹಿಸಿರಲಿಲ್ಲ. ಅವರ ಮನೆಗೆ ಬಂದ ಪ್ರತಿಯೊಬ್ಬರನ್ನೂ ತಮ್ಮ ಮನೆಯವರಂತೆ ಕಾಣುತ್ತಿದ್ದರು" ಎಂದು ಹಲವರು ಭಾವುಕರಾಗಿ ಮಾತನಾಡಿದರು. ಅವರ ಅಗಲಿಕೆ ಕೇವಲ ಕುಟುಂಬಕ್ಕೆ ಮಾತ್ರವಲ್ಲದೆ ಸಮಸ್ತ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಜನರು ಕಣ್ಣೀರಿನಿಂದ ಸಂತಾಪ ಸೂಚಿಸಿದರು.

ಸಮಾಜದಲ್ಲಿ ಅಪಾರ ಗೌರವ ಹಾಗೂ ಮಾನ್ಯತೆ ಪಡೆದಿದ್ದ ಅವರು ಎಲ್ಲ ಧರ್ಮದ ಜನರೊಂದಿಗೂ ಉತ್ತಮ ಬಾಂಧವ್ಯ ಹೊಂದಿದ್ದರು. ಅವರ ಸರಳ ಜೀವನ ಶೈಲಿ, ಪ್ರಾಮಾಣಿಕತೆ ಹಾಗೂ ದಾನಶೀಲತೆ ಎಲ್ಲರಿಗೂ ಮಾದರಿಯಾಗಿ-ತ್ತು ಎಂದು ಹಲವರು ಅಭಿಪ್ರಾಯಪಟ್ಟರು. ಇಸ್ಲಾಮಿಕ್ ಸಂಪ್ರದಾಯದಂತೆ ಜನಾಝಾ ನಮಾಝ್ ನೆರವೇರಿಸಲಾಯಿತು. ಜನಾಝಾ ನಮಾಝ್‌ನಲ್ಲಿ ಸಾವಿರಾರು ಭಕ್ತರು ಭಾಗವಹಿಸಿ ಮರಹೂಂ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥಿಸಿದರು. ಬಳಿಕ ಮಯ್ಯತ್ ಮೆರವಣಿಗೆ ಮೂಲಕ ಸಿರುಗುಪ್ಪದ ಸುನ್ನೀ ಖಬರಸ್ತಾನಕ್ಕೆ ಕೊಂಡೊಯ್ಯಲಾಯಿತು. ಅಲ್ಲಿ ಧಾರ್ಮಿಕ ವಿಧಿವಿಧಾನಗಳೊಂದಿಗೆ ಮಯ್ಯತ್‌ನ್ನು ಮಣ್ಣಿನ ಮಡಿಲಿಗೆ ಒಪ್ಪಿಸಲಾಯಿತು.

ಈ ಸಂದರ್ಭದಲ್ಲಿ ಬಳ್ಳಾರಿ ಮುಫ್ತಿ ಅವರು ವಿಶೇಷ ನಮಾಝ್ ನೆರವೇರಿಸಿ, ಮರಹೂಂ ಅವರ ಜೀವನದ ಸತ್ಕಾರ್ಯಗಳನ್ನು ಸ್ಮರಿಸಿದರು. "ಅಲ್–ಹಾಜ್ ಎ. ಅಬ್ದುಲ್ ನಬಿ ಅವರು ಸಮಾಜದಲ್ಲಿ ಶಾಂತಿ, ಪ್ರೀತಿ ಮತ್ತು ಸಹೋದರತ್ವದ ಸಂದೇಶ ಸಾರಿದ ವ್ಯಕ್ತಿ. ಅವರು ತಮ್ಮ ಜೀವನವನ್ನು ಮಾನವ ಸೇವೆಗೆ ಅರ್ಪಿಸಿದ್ದರು" ಎಂದು ಹೇಳಿದರು. ಬಳಿಕ ಆಂಧ್ರ ಪ್ರದೇಶದ ಅದೋನಿಯ ಖಲೀಫಾ ಹಜರತ್ ಸಯ್ಯದ್ ಖಾಲಿದ್ ನಿಜಾಮಿ ಅವರು ವಿಶೇಷ ದುಆ ನೆರವೇರಿಸಿ, "ಅಲ್ಲಾಹ್ ತಅ?ಲಾ ಅವರು ಮರಹೂಂ ಅವರ ಎಲ್ಲಾ ತಪ್ಪುಗಳನ್ನು ಮನ್ನಿಸಿ, ಜನ್ನತುಲ್ ಫಿರ್ದೌಸ್‌ನಲ್ಲಿ ಉನ್ನತ ಸ್ಥಾನ ನೀಡಲಿ. ಅವರ ಸೇವೆ, ಸೌಜನ್ಯ, ಪ್ರೀತಿ ಮತ್ತು ಮಾನವೀಯತೆ ಎಂದೆಂದಿಗೂ ಸಮಾಜದ ಹೃದಯದಲ್ಲಿ ಜೀವಂತವಾಗಿರುತ್ತದೆ.

ಅಲ್ಲಾಹ್ ಮತ್ತು ರಸೂಲ್ ಅವರ ಕೃಪೆ ಸದಾ ಅವರ ಮೇಲೆ ಇರಲಿ" ಎಂದು ಪ್ರಾರ್ಥಿಸಿದರು. ಖಬರಸ್ತಾನದಲ್ಲಿ ಪವಿತ್ರ ಖುರಾನ್ ಪಠಣ, ಫಾತಿಹಾ ಹಾಗೂ ದುಆ ಕಾರ್ಯಕ್ರಮಗಳು ನಡೆದವು. ಸಾವಿರಾರು ಜನರು ಕೈಎತ್ತಿ ಪ್ರಾರ್ಥನೆ ಸಲ್ಲಿಸಿ, ಮರಹೂಂ ಅವರ ಆತ್ಮಕ್ಕೆ ಶಾಂತಿ ಕೋರಿ ಅಲ್ಲಾಹ್ ಅವರ ಕೃಪೆ ಸದಾ ಇರಲೆಂದು ಬೇಡಿಕೊಂಡರು. ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದ್ದ ಅನೇಕ ಪತ್ರಕರ್ತರು ಮಾತನಾಡಿ, "ಪತ್ರಿಕೋದ್ಯಮದಲ್ಲಿ ಅವರು ಪ್ರಾಮಾಣಿಕತೆ ಮತ್ತು ನಿಷ್ಠೆಯ ಪ್ರತೀಕವಾಗಿದ್ದರು. ಯುವ ಪತ್ರಕರ್ತರಿಗೆ ಸದಾ ಮಾರ್ಗದರ್ಶನ ನೀಡುತ್ತಿದ್ದರು. ಸತ್ಯದ ಪರ ನಿಲ್ಲುವ ಧೈರ್ಯ ಹೊಂದಿದ್ದರು" ಎಂದು ಸ್ಮರಿಸಿದರು.

ನಗರದ ಹಿರಿಯರು ಹಾಗೂ ಸ್ನೇಹಿತರು ಮಾತನಾಡಿ, "ಅವರು ಸಮಾಜದಲ್ಲಿ ಎಲ್ಲರನ್ನು ಒಗ್ಗೂಡಿಸುವ ವ್ಯಕ್ತಿತ್ವ ಹೊಂದಿದ್ದರು. ಧರ್ಮದ ಹೆಸ-ರಿನಲ್ಲಿ ಎಂದಿಗೂ ಬೇಧ ಮಾಡಲಿಲ್ಲ. ಎಲ್ಲರೊಂದಿಗೆ ನಗುತ್ತಾ, ಪ್ರೀತಿಯಿಂದ ಮಾತನಾಡುತ್ತಿದ್ದರು. ಅವರ ಅಗಲಿಕೆ ಸಮಾಜಕ್ಕೆ ದೊಡ್ಡ ಆಘಾತವಾಗಿದೆ" ಎಂದು ದುಃಖ ವ್ಯಕ್ತಪಡಿಸಿದರು. ಅಂತಿಮವಾಗಿ ಸುನ್ನಿ ಖಬರಸ್ತಾನದಲ್ಲಿ ಫಾತಿಹಾ ಪಠಣದೊಂದಿಗೆ ಅಂತಿಮ ದುಆ ಸಲ್ಲಿಸಿ ಭಾವಪೂರ್ಣ ವಿದಾಯ ಕೋರಲಾಯಿತು. ಕುಟುಂಬಸ್ಥರು, ಬಂಧುಗಳು ಹಾಗೂ ಸಾವಿರಾರು ಜನರು ಕಣ್ಣೀರಿನ ನಮನ ಸಲ್ಲಿಸಿ ಮರಹೂಂ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥಿಸಿದರು. "ಇನ್ನಾ ಲಿಲ್ಲಾಹಿ ವ ಇನ್ನಾ ಇಲೈಹಿ ರಾಜಿಊನ್" ವರದಿ : ಮಸೀದಿ, ಅಬ್ದುಲ್ ಗೌಸ್, ಸಿರುಗುಪ್ಪ

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.